ಬೆಳಗಾವಿ ವರದಿ

ಪ್ರಧಾನ ಸಂಪಾದಕರು: ಸತೀಶ್.ಬಿ.ಜಿ

BELAGAVI VARADI KANNADA DAILY

ಕನ್ನಡ ದಿನಪತ್ರಿಕೆ 24

Read,Share and Follow - www.belagavivaradi.com

Vol-04 Issue: 273 ₹ ಬೆಲೆ: 4 Sunday, 24, December,2023 newsbelagavi@gmail.com 9900332089 Regn,No:G-2/PMG/KA/NK/BM/139/2021-23

ರಾಜ್ಯದಲ್ಲಿ ಮತ್ತೆ ತಾರಕಕ್ಕೇರಿದ

ಹಿಜಾಬ್ ಸಂಘರ್ಷ

ಬೆಂಗಳೂರು: ಹಿಜಾಬ್ ನಿಷೇಧ ವಾಪಸ್ ಪಡೆಯುವ ಮುಖ್ಯಮಂತ್ರಿ ಸಿದ್ದರಾಮಯ್ಯರವರ ಹೇಳಿಕೆ ರಾಜ-ಕೀಯ ಕಿಚ್ಚಿಗೆ ಕಾರಣವಾಗಿದೆ. ಬಿಜೆಪಿ ನಾಯಕರುಗಳು ಹಿಜಾಬ್ ನಿಷೇಧ ವಾಪಸ್‌ಗೆ ತೀವ್ರ ವಿರೋಧ ವ್ಯಕ್ತಪಡಿಸಿ ಮುಖ್ಯಮಂತ್ರಿ ಸಿದ್ದರಾಮಯ್ಯ ಸಮಾಜವನ್ನು ವಿಭಜಿಸಲು ಹೊರಟಿದ್ದಾರೆ ಎಂದು ವಾಗ್ದಾಳಿ ನಡೆಸಿದ್ದರೆ, ಕಾಂಗ್ರೆಸ್ ನಾಯಕರು ಮುಖ್ಯಮಂತ್ರಿಗಳ ಹೇಳಿಕೆಯನ್ನು ಸಮರ್ಥಿಸಿಕೊಂಡು ಅವರ ಬೆಂಬಲಕ್ಕೆ ನಿಂತಿದ್ದಾರೆ. ಹೀಗಾಗಿ ರಾಜ್ಯದಲ್ಲಿ ಮತ್ತೆ ಹಿಜಾಬ್ ಪರ-ವಿರೋಧ, ಸಂಘರ್ಷ ಆರಂಭವಾದಂತಾಗಿದೆ. ಮಾಜಿ ಮುಖ್ಯಮಂತ್ರಿಗಳಾದ ಯಡಿಯೂರಪ್ಪ, ಬಸವರಾಜ ಬೊಮ್ಮಾಯಿ, ಬಿಜೆಪಿ ರಾಜ್ಯಾಧ್ಯಕ್ಷ ವಿಜಯೇಂದ್ರ, ವಿಪಕ್ಷ ನಾಯಕ ಆರ್, ಅಶೋಕ್, ಮಾಜಿ ಸಚಿವ. ಸಿ.ಟಿ ರವಿ, ಶಾಸಕ ಬನಗೌಡ ಪಾಟೀಲ್ ಯತ್ನಾಳ್ ಸೇರಿದಂತೆ ಬಿಜೆಪಿಯ ಬಹುತೇಕ ನಾಯಕರುಗಳು ಹಿಜಾಬ್ ನಿಷೇಧದ ಮುಖ್ಯಮಂತ್ರಿ ಹೇಳಿಕೆಗೆ ಕಿಡಿಕಾರಿ ಹಿಜಾಬ್ ನಿಷೇಧ ಪಾವಸ್ ಪಡೆದರೆ ಹೋರಾಟ ನಡೆಸುವ ಎಚ್ಚರಿಕೆ ನೀಡಿದ್ದರೆ ಕಾಂಗ್ರೆಸ್ ನಾಯಕರು ಮುಖ್ಯಮಂತ್ರಿಗಳ ಹೇಳಿಕೆಯನ್ನು ಸಮರ್ಥಿಸಿಕೊಂಡಿದ್ದಾರೆ. ಹಿಜಾಬ್ ಈಗ ಮತ್ತೆ ಮುನ್ನೆಲೆಗೆ ಬಂದು, ಕೈ-ಕಮಲ ನಾಯಕರ ನಡುವೆ ವಾಕ್ಸಮರಕ್ಕೂ ಕಾರಣವಾಗಿದೆ. ಯಾರೂ ಸಹ ಹಿಜಾಬ್ ನಿಷೇಧವನ್ನು ವಾಪಸ್ ಪಡೆಯಬೇಕು ಎಂಬ ಬೇಡಿಕೆ ಇಟ್ಟಿರಲಿಲ್ಲ. ಶಾಲಾ ಮಕ್ಕಳಾಗಲಿ ವಿದ್ಯಾರ್ಥಿನಿಯರಾಗಲಿ ಯಾರೂ ಹಿಜಾಬ್ ನಿಷೇಧ ವಾಪಸ್ ಪಡೆಯಿರಿ ಎಂದು ಹೇಳಿರಲಿಲ್ಲ

ಹಿಜಾಬ್ ನಿಷೇಧ ವಾಪಸ್ ತೀರ್ಮಾನ ಖಂಡನಾರ್ಹ

ನವದೆಹಲಿಯಲ್ಲಿಂದು ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ ವಿಜಯೇಂದ್ರ ಅವರು ಹಿಜಾಬ್ ನಿಷೇಧ ವಾಪಸ್ ತೀರ್ಮಾನ ಖಂಡನಾರ್ಹ, ಮುಖ್ಯಮಂತ್ರಿ ಸಿದ್ದರಾಮಯ್ಯರವರು ಧರ್ಮಧರ್ಮಗಳ ನಡುವೆ ವಿಷ ಬೀಜ ಬಿತ್ತುವ ಕೆಲಸವನ್ನು ಮಾಡುತ್ತಿದ್ದಾರೆ. ಯುವ ಜನರನ್ನು ಧರ್ಮದ ಆಧಾರದಲ್ಲಿ ವಿಭಜಿಸಲು ಹೊರಟಿದ್ದಾರೆ. ಸರ್ಕಾರದ ಒಡೆದಾಳುವ ನೀತಿಯನ್ನು ಬಿಜೆಪಿ ಖಂಡಿಸುತ್ತದೆ ಎಂದರು. ಮುಖ್ಯಮಂತ್ರಿ ಸಿದ್ದರಾಮಯ್ಯರವರು ನಿನ್ನೆ ಹಿಜಾಬ್ ವಿಚಾರದಲ್ಲಿ ನೀಡಿರುವ ಹೇಳಿಕೆ ಬೇಜವಾಬ್ದಾರಿ ಹೇಳಿಕೆಯಾಗಿದೆ. ಮತ್ತೆ ಹಿಜಾಬ್‌ಗೆ ಅವಕಾಶ ಮಾಡಿಕೊಡುವುದಾಗಿ ಹೇಳುವ ಮೂಲಕ ಶಿಕ್ಷಣ ಕ್ಷೇತ್ರವನ್ನು ಕಲುಷಿತಗೊಳಿಸುವ ಕೆಲಸಕ್ಕೆ ಸ್ವತಃ ಮುಖ್ಯಮಂತ್ರಿಗಳೇ ಕೈ ಹಾಕಿರುವುದು ಈ ನಾಡಿನ ದುರಾದೃಷ್ಟ ಎಂದು ಬಿ.ವೈ ವಿಜಯೇಂದ್ರ ಟೀಕಿಸಿದರು.

ಹೀಗಿರುವಾಗ ಮುಖ್ಯಮಂತ್ರಿ ಸಿದ್ದರಾಮಯ್ಯ ಈ ರೀತಿ ಹೇಳಿಕೆ ನೀಡಿರುವುದರ ಹಿಂದೆ ರಾಜಕೀಯ ಇದೆ. ಕಾಂಗ್ರೆಸ್‌ಗೆ ಚುನಾವಣೆಯಲ್ಲಿ ಯಾವಾಗ ಹಿನ್ನಡೆಯಾಗುತ್ತೋ ಆಗ ಈ ರೀತಿಯ ನಿರ್ಧಾರಗಳನ್ನು ಕೈಗೊಂಡು ಶಾಂತಿ ಸುವ್ಯವಸ್ಥೆಯನ್ನು ಹಾಳು ಮಾಡೋದು ಕಾಂಗ್ರೆಸ್ ಉದ್ದೇಶ ಎಂದು ಆರೋಪ ಮಾಡಿ ಸಿದ್ದರಾಮಯ್ಯರವರು ಯಾವುದೋ ಒಂದು ಸಮುದಾಯಕ್ಕೆ ಸೇರಿದ ಮುಖ್ಯಮಂತ್ರಿ ಅಲ್ಲ, ನಾಡಿನ ಆರೂವರೆ ಕೋಟಿ ಜನರ ಮುಖ್ಯಮಂತ್ರಿ, ಹಾಗಾಗಿ ಜವಾಬ್ದಾರಿಯಿಂದ ಮಾತನಾಡಬೇಕು. ಬೇಜವಾಬ್ದಾರಿ ಹೇಳಿಕೆ ಸಲ್ಲದು ಎಂದರು. ಮುಖ್ಯಮಂತ್ರಿ ಸಿದ್ದರಾಮಯ್ಯರವ-ರಿಗೆ ಇಂತಹ ಹೇಳಿಕೆಯನ್ನು ಯಾರೂ ನಿರೀಕ್ಷೆ ಮಾಡಿರಲಿಲ್ಲ. ಕನಿಷ್ಠ ಪಕ್ಷ ಶಾಲಾ-ಕಾಲೇಜುಗಳಿಗೂ ಹೋಗುವ ಮಕ್ಕಳನ್ನಾದರೂ ರಾಜಕೀಯದಿಂದ ದೂರ ಇಡುವ ಕೆಲಸವನ್ನು ಮುಖ್ಯಮಂತ್ರಿಗಳು ಮಾಡಬೇಕಿತ್ತು. ಆದ-ರೆ, ಮುಖ್ಯಮಂತ್ರಿಗಳೇ ಸಮಾಜದಲ್ಲಿ ವಿಷ ಬೀಜ ಬಿತ್ತುವ ಒಡೆದಾಳುವ ನೀತಿಯನ್ನು ಮಾಡುತ್ತಿರುವುದು ದುರದೃಷ್ಟಕರ ಎಂದರು.ಶಾಲೆಗಳಲ್ಲಿ ಎಲ್ಲರೂ ಸಮಾನರು ಎಂಬುದನ್ನು ಸಾರಲು ಸಮವಸ್ತ್ರ ನೀತಿ ಸಂಹಿತೆಯನ್ನು ತರಲಾಗಿದೆ. ಇದನ್ನು ಸಿದ್ದರಾಮಯ್ಯರವರು ಅರ್ಥ ಮಾಡಿಕೊಳ್ಳಬೇಕು ಇದು ಮತ ರಾಜ-ಕಾರಣಕ್ಕಾಗಿ ಅಲ್ಪಸಂಖ್ಯಾತರನ್ನು ಓಲೈಸಲು ಹಿಜಾಬ್ ನಿಷೇಧ ವಾಪಸ್ ಹೇಳಿಕೆ ನೀಡಿದ್ದಾರೆ ಎಂದು ಟೀಕಿಸಿದರು. ಕಾಂಗ್ರೆಸ್ ಪಕ್ಷ ಮೊದಲಿನಿಂದಲೂ ಅಲ್ಪಸಂಖ್ಯಾತರನ್ನು ಓಟ್ ಬ್ಯಾಂಕ್ ಆಗಿ ಬಳಕೆ ಮಾಡಿಕೊಂಡಿದೆ. ಆದ-ರೆ, ಪ್ರಧಾನಿ ಮೋದಿ ಅವರು ಅಲ್ಪಸಂಖ್ಯಾತ ಮಹಿಳೆಯರ ಹಿತವನ್ನು ಗಮನದಲ್ಲಿಟ್ಟುಕೊಂಡು ತ್ರಿವಳಿ ತಲಾಕ್‌ನ್ನು ನಿಷೇಧ ಮಾಡಿದರು. ಕಾಂಗ್ರೆಸ್‌ನವರು ಅಲ್ಪಸಂಖ್ಯಾತರಿಗೆ ಏನು ಮಾಡಿದ್ದಾರೆ ಎಂದು ಪ್ರಶ್ನಿಸಿದರು.

ಕಾಂಗ್ರೆಸ್ ಪಕ್ಷ ಹಿಂದಿನಿಂದಲೂ ಬ್ರಿಟಿಷರ ಒಡೆದಾಳುವ ನೀತಿಯನ್ನು ಪರಂಪರೆ ಮುಂದುವರೆಸಿಕೊಂಡು ಬಂದಿದೆ. ಪಂಚರಾಜ್ಯ ಚುನಾವಣೆಗಳ ಫಲಿತಾಂಶ ದೇಶದ ಪ್ರಜ್ಞಾವಂತ ಮತದಾರರು ಕಾಂಗ್ರೆಸ್‌ನ ಗ್ಯಾರಂ-ಟಿಯನ್ನು ನಂಬುವುದಿಲ್ಲ. ಅದರ ಬದಲು ಮೋದಿ ಗ್ಯಾರೆಂಟಿಯನ್ನು ನಂಬುತ್ತಾರೆ ಎಂಬುದನ್ನು ಸಾಬೀತುಪಡಿಸಿದೆ. ಹಾಗಾಗಿ, ಕಾಂಗ್ರೆಸ್ ಪಕ್ಷ ಹತಾಶೆಯಿಂದ ಸಮಾಜದ ಮಧ್ಯೆ, ಧರ್ಮಧರ್ಮಗಳ ನಡುವೆ ವಿಷಬೀಜ ಬಿತ್ತುವ ಕೆಲಸವನ್ನು ಮಾಡುತ್ತಿದೆ ಎಂದು ಟೀಕಿಸಿದರು. ಈ ಹಿಂದೆ ಮುಖ್ಯಮಂತ್ರಿ ಸಿದ್ದರಾಮಯ್ಯ 5 ವರ್ಷ ಮುಖ್ಯಮಂತ್ರಿಯಾಗಿದ್ದಾಗ ಮತ್ತೆ ಅಧಿಕಾರ ಸಿಗುವುದು ಕಷ್ಟ ಎಂದು ತಿಳಿದಾಗ ಲಿಂಗಾಯತರು ಮತ್ತು ವೀರಶೈವರನ್ನು ಒಡೆದು ಬೆಂಕಿ ಹಚ್ಚುವ ಕೆಲಸ ಮಾಡಿದ್ದರು. ಈಗ ಮತ್ತೆ ಧರ್ಮದಲ್ಲಿ ವಿಷಬೀಜ ಬಿತ್ತಿ ಲೋಕಸಭಾ ಚುನಾವಣೆಯಲ್ಲಿ ಹೆಚ್ಚಿನ ಸ್ಥಾನ ಗೆಲ್ಲುವ ಕನಸು ಕಾಣುತ್ತಿದ್ದಾರೆ. ಆದರೆ, ಜನ ಇವರಿಗೆ ಪಾಠ ಕಲಿಸುತ್ತಾರೆ ಎಂದರು.

ಅಲ್ಪಸಂಖ್ಯಾತರನ್ನು ಓಲೈಸುವ ಕೆಲಸ ಮಾಡುವ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದ ನಂತರ ಪರೀಕ್ಷೆ ಬರೆಯುವ ಹಿಂದೂ ಮಹಿಳೆಯರ ತಾಲಿ, ಕಾಲುಂಗುರವನ್ನು ತೆಗೆದಿರಿಸಿದ ಪ್ರಕರಣವೂ ನಡೆದಿತ್ತು ಎಂಬುದನ್ನು ನೆನಪು ಮಾಡಿದ ವಿಜೇಯೇಂದ್ರ ಅವರು ಕಾಂಗ್ರೆಸ್ ಸರ್ಕಾರ ಹಿಜಾಬ್ ವಿಚಾರ ಎಲ್ಲವನ್ನೂ ಬಿಟ್ಟು ಬರದಿಂದ ಕಂಗೆಟ್ಟಿರುವ ರೈತರ ನೆರವಿಗೆ ಧಾವಿಸಲಿ ಎಂದು ಒತ್ತಾಯಿಸಿದರು.

ಹಣ ಅಕ್ರಮ ವರ್ಗಾವಣೆ ಪ್ರಕರಣ

ED ಎದುರು ಹಾಜರಾದ ಕಾರ್ತಿ ಚಿದಂಬರಂ

ನವದೆಹಲಿ: ಹಣ ಅಕ್ರಮ ವರ್ಗಾವಣೆ ಪ್ರಕರಣಕ್ಕೆ ಸಂಬಂಧಿಸಿದ ವಿಚಾರಣೆಗೆ ಕಾಂಗ್ರೆಸ್ ಸಂಸದ ಕಾರ್ತಿ ಚಿದಂಬರಂ ಅವರು ಜಾರಿ ನಿರ್ದೇಶನಾಲಯ (ಇಡಿ) ಎದುರು ಶನಿವಾರ ಹಾಜರಾಗಿದ್ದಾರೆ. 2011ರಲ್ಲಿ ಚೀನಾದ ಕೆಲವರಿಗೆ ವಿಸಾ ನೀಡಲು ಕಿಕ್‌ಬ್ಯಾಕ್ ರೂಪದಲ್ಲಿ 50 ಲಕ್ಷ ಪಡೆದ ಆರೋಪ ಕಾರ್ತಿ ಅವರ ಮೇಲಿದೆ.

ಕಾರ್ತಿ ಅವರೊಂದಿಗೆ ವೇದಾಂತ ಸಮೂಹದ ಹಿರಿಯ ಅಧಿಕಾರಿ ಎಸ್. ಭಾಸ್ಕರರಾಮನ್ ಅವರಿಗೂ ಈ ಹಣ ಸಂದಾಯವಾಗಿದೆ ಎಂದು ಸಿಬಿಐ ದಾಖಲಿಸಿಕೊಂಡಿರುವ ಎಫ್‌ಐಆರ್‌ನಲ್ಲಿ ಹೇಳಲಾಗಿದೆ. ಈ ಪ್ರಕರಣವನ್ನು ಆಧರಿಸಿ ಜಾರಿ ನಿರ್ದೇಶನಾಲಯವು ತನಿಖೆ ಆರಂಭಿಸಿದೆ.

ಕೇಜ್ರಿವಾಲ್‌ಗೆ 3ನೇ ಬಾರೀ ಇಡಿ ಸಮನ್ಸ್

ನವದೆಹಲಿ: ದೆಹಲಿ ಅಬಕಾರಿ ನೀತಿ ಅನುಷ್ಠಾನ ಪ್ರಕರಣದಲ್ಲಿ ವಿಚಾರಣೆಗೆ ಜನವರಿ 3 ರಂದು ಹಾಜರಾಗುವಂತೆ ದೆಹಲಿ ಮುಖ್ಯಮಂತ್ರಿ ಅರವಿಂದ್ ಕೇಜ್ರಿವಾಲ್ ಅವರಿಗೆ ಜಾರಿ ನಿರ್ದೇಶನಾಲಯ ಮೂರನೇ ಬಾರಿಗೆ ಸಮನ್ಸ್ ಜಾರಿ ಮಾಡಿದೆ.ಈ ಮುಂಚೆ ಆಮ್ ಆದ್ಮಿ ಪಾರ್ಟಿ ಸಂಚಾಲಕರೂ ಆಗಿರುವ ಅರವಿಂದ್ ಕೇಜ್ರಿವಾಲ್ ಅವರಿಗೆ ನವೆಂಬರ್ 2 ಮತ್ತು ಡಿಸೆಂಬರ್ 21 ರಂದು ನೋಟಿಸ್ ನೀಡಲಾಗಿತ್ತು ಆದರೆ ಅವರು ಪೂರ್ವ ನಿಯೋಜಿತ ಕಾರ್ಯಕ್ರಮದ ನೆಪದಲ್ಲಿ ಸಮನ್ಸ್ ನೀಡಿದ್ದರೂ ಜಾರಿ ನಿರ್ದೇಶನಾಲಯದ ಮುಂದೆ ಹಾಜರಾಗಿರಿಲ್ಲ ಅಬಕಾರಿ ನೀತಿ ಪ್ರಕರಣಕ್ಕೆ ಸಂಬಂಧಿಸಿದ ಅಕ್ರಮ ಹಣ ವರ್ಗಾವಣೆ ತನಿಖೆಯಲ್ಲಿ ಜನವರಿ 3ರಂದು ದೆಹಲಿಯ ಕಚೇರಿಯಲ್ಲಿ ಹಾಜರಾಗುವಂತೆ ಜಾರಿ ನಿರ್ದೇಶನಾಲಯ ನೋಟೀಸ್ ಜಾರಿ ಮಾಡಿದೆ. ಮೊದಲ ಬಾರಿಗೆ ಸಮನ್ಸ್ ನೀಡಿದ್ದಾಗ ಅರವಿಂದ ಕೇಜ್ರಿವಾಲ್ ಅವರು ಐದು ರಾಜ್ಯಗಳ ವಿಧಾನಸಭಾ ಚುನಾವಣೆಯ ಹಿನ್ನೆಲೆಯಲ್ಲಿ ತಮ್ಮ ಕಾರ್ಯನಿರತ ವೇಳಾಪಟ್ಟಿಯ ಕಾರಣ ಉಲ್ಲೇಖಿಸಿದ್ದರು. ಏತನ್ಮಧ್ಯೆ, ಎರಡನೇ ಸಮನ್ಸ್ ತಪ್ಪಿದ ನಂತರ, ಅವರು ತಮ್ಮ ವಿರುದ್ಧ ವೈಯಕ್ತಿಕ ಹಾಜರಾತಿಗಾಗಿ ನೀಡಲಾದ ನೋಟಿಸ್ "ಕಾನೂನಿಗೆ ಅನುಗುಣವಾಗಿಲ್ಲ" ಮತ್ತು ಅದನ್ನು ಹಿಂಪಡೆಯಬೇಕು ಎಂದು ಪ್ರಕರಣದ ತನಿಖಾಧಿಕಾರಿಗೆ ಪತ್ರ ಬರೆದಿದ್ದಾರೆ.

ಮಂಡ್ಯದಿಂದಲೇ ಸ್ಪರ್ಧೆ: ಸುಮಲತಾ

ಮಂಡ್ಯ: ಮುಂಬರುವ ಲೋಕಸಭೆ ಚುನಾವಣೆಯಲ್ಲಿ ಮಂಡ್ಯದಿಂದಲೇ ಸ್ಪರ್ಧೆ ಖಚಿತ. ಈ ಕ್ಷೇತ್ರ ಬಿಟ್ಟು ಎಲ್ಲಿಯೂ ಹೋಗುವುದಿಲ್ಲ ಎಂದು ಸಂಸದೆ ಸುಮಲತಾ ಹೇಳಿದರು. ಮದ್ದೂರಿನಲ್ಲಿ ಶನಿವಾರ ಪತ್ರಕರ್ತರಿಗೆ ಪ್ರತಿಕ್ರಿಯೆ ನೀಡಿದ ಅವರು ' ಈ ಚುನಾವಣೆಯಲ್ಲಿಯೂ ಸ್ಪರ್ಧೆ ಮಾಡುತ್ತೇನೆ. ಮುಂದೆ ಎಲ್ಲ ವಿಷಯವನ್ನೂ ತಿಳಿಸುತ್ತೇನೆ' ಎಂದಷ್ಟೇ ಹೇಳಿದರು. ರಾಜ್ಯದಲ್ಲಿ ಬಿಜೆಪಿ-ಜೆಡಿಎಸ್ ಮೈತ್ರಿ ಹಾಗೂ ಕ್ಷೇತ್ರ ಹಂಚಿಕೆ ಕುರಿತು ಪ್ರತಿಕ್ರಿಯಿಸಿ ' ಮೈತ್ರಿ ವಿಚಾರ ನನಗೆ ಗೊತ್ತಿಲ್ಲ. ಆ ಬಗ್ಗೆ ನಾನು ಪ್ರತಿಕ್ರಿಯೆ ನೀಡುವುದೂ ಇಲ್ಲ' ಎಂದರು. ' ಮಂಡ್ಯ ಸೇರಿದಂತೆ ರಾಜ್ಯದಲ್ಲಿನ ಬರ ಪರಿಸ್ಥಿತಿ ಕುರಿತು ಸಂಸತ್ ಅಧಿವೇಶನದ ಶೂನ್ಯವೇಳೆಯಲ್ಲಿ ಕೇಂದ್ರ ಸರ್ಕಾರದ ಗಮನ ಸೆಳೆಯುವ ಪ್ರಯತ್ನ ಮಾಡಿದ್ದೇನೆ. ಕಾವೇರಿ ವಿಚಾರ ಎಂದು ಬಂದಾಗ ನಾವು ಒಬ್ಬರನ್ನು ದೂಷಿಸುವುದು ಸರಿಯಲ್ಲ. ನ್ಯಾಯಾಲಯಗಳಲ್ಲಿ ಎಂದೂ ಕರ್ನಾಟಕಕ್ಕೆ ನ್ಯಾಯ ದೊರೆತಿಲ್ಲ.

ಎರಡೂ ರಾಜ್ಯ ಸರ್ಕಾರಗಳು ಕುಳಿತು ಮಾತನಾಡಿ ಈ ಸಮಸ್ಯೆಯನ್ನು ಬಗೆಹರಿಸಿಕೊಳ್ಳಬೇಕು' ಎಂದು ಸಲಹೆ ನೀಡಿದರು.

ಗಿಫ್ಟ್ ಸಿಟಿಯಲ್ಲಿ ಮದ್ಯ ನಿಷೇಧ ತೆರವು

ಅಹಮದಾಬಾದ್: ಗುಜರಾತ್ ಇಂಟರ್ನ್ಯಾಷನಲ್ ಫೈನಾನ್ಸ್ ಟೆಕ್-ಸಿಟಿ(GIFT ಸಿಟಿ) ಯಲ್ಲಿ "ಜಾಗತಿಕ ವ್ಯಾಪಾರ ಪರಿಸರ ವ್ಯವಸ್ಥೆ"ಗೆ ಅವಕಾಶ ಕಲ್ಪಿಸುವ ಉದ್ದೇಶದಿಂದ ಗುಜರಾತ್ ಸರ್ಕಾರ, ಶುಕ್ರವಾರ ಈ ಪ್ರದೇಶದಲ್ಲಿ ಮದ್ಯ ನಿಷೇಧ ಆದೇಶವನ್ನು ಹಿಂಪಡೆದಿದೆ. ಮಹಾತ್ಮಾ ಗಾಂಧಿಯವರು ಜನಿಸಿದ ರಾಜ್ಯವಾಗಿರುವುದರಿಂದ, ಗುಜರಾತ್ ರಚನೆಯಾದಾಗಿನಿಂದ ರಾಜ್ಯದಲ್ಲಿ ಮದ್ಯದ ಪಾನೀಯಗಳ ತಯಾರಿಕೆ, ಸಂಗ್ರಹಣೆ, ಮಾರಾಟ ಮತ್ತು ಸೇವನೆಯನ್ನು ನಿಷೇಧಿಸಲಾಗಿದೆ. ಈ ಹಿಂದೆ ರಾಜ್ಯದ ಯಾವುದೇ ಪ್ರದೇಶದಲ್ಲಿ ಇಂತಹ ವಿನಾಯಿತಿ ನೀಡಿರಲಿಲ್ಲ. ಆದರೆ "ಗಿಫ್ಟ್ ಸಿಟಿ ಜಾಗತಿಕ ಆರ್ಥಿಕ ಮತ್ತು ತಾಂತ್ರಿಕ ಕೇಂದ್ರವಾಗಿ ಹೊರಹೊಮ್ಮಿದೆ. ಇದು ಆರ್ಥಿಕ ಚಟುವಟಿಕೆಗಳಲ್ಲಿ ತೊಡಗಿದೆ. ಜಾಗತಿಕ ವ್ಯಾಪಾರ ಪರಿಸರ ವ್ಯವಸ್ಥೆಯನ್ನು ಕಲ್ಪಿಸಲು ಗಿಫ್ಟ್ ಸಿಟಿ ಪ್ರದೇಶದಲ್ಲಿ 'ವೈನ್ ಮತ್ತು ಡೈನ್' ಸೌಲಭ್ಯಕ್ಕೆ ಅನುಮತಿ ನೀಡುವ ಮಹತ್ವದ ನಿರ್ಧಾರವನ್ನು ತೆಗೆದುಕೊಳ್ಳಲಾಗಿದೆ ರಾಜ್ಯ ಸರ್ಕಾರ ಪ್ರಕಟಣೆಯಲ್ಲಿ ತಿಳಿಸಿದೆ. "ಈ ಹೊಸ ವ್ಯವಸ್ಥೆಯಡಿಯಲ್ಲಿ, ಗಿಫ್ಟ್ ಸಿಟಿ ಪ್ರದೇಶದಲ್ಲಿರುವ ಹೋಟೆಲ್‌ಗಳು, ರೆಸ್ಟೋರೆಂಟ್‌ಗಳು ಮತ್ತು ಕ್ಲಬ್‌ಗಳಿಗೆ(ಅಸ್ತಿತ್ವದಲ್ಲಿರುವ ಮತ್ತು ಮುಂದೆ ಬರಲಿರುವ) ವೈನ್ ಮತ್ತು ಡೈನ್ ಸೌಲಭ್ಯಕ್ಕೆ ಪರವಾನಗಿಗಳನ್ನು ನೀಡಲಾಗುತ್ತದೆ" ಎಂದು ಪ್ರಕಟಣೆ ಹೇಳಿದೆ. ಆದಾಗ್ಯೂ, ಅಂತಹ ಹೋಟೆಲ್‌ಗಳು, ರೆಸ್ಟೋರೆಂಟ್ ಮತ್ತು ಕ್ಲಬ್ ಗಳು ಜನರಿಗೆ ಮದ್ಯದ ಬಾಟಲಿಗಳನ್ನು ಮಾರಾಟ ಮಾಡಲು ಅನುಮತಿ ಇಲ್ಲ ಎಂದು ಸರ್ಕಾರ ಸ್ಪಷ್ಟಪಡಿಸಿದೆ.

ಮಕ್ಕಳಿಂದಲೇ ಶೌಚಾಲಯ ಸ್ವಚ್ಚ ಮುಖ್ಯ ಶಿಕ್ಷಕಿ ಬಂಧನ

ಬೆಂಗಳೂರು: ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಮಕ್ಕಳಿಂದಲೇ ಶೌಚಾಲಯ ಸ್ವಚ್ಚಗೊಳಿಸಿದ ಪ್ರಕರಣಕ್ಕೆ ಸಂಬಂಧಿಸಿದಂತೆ ಶಾಲೆಯ ಮುಖ್ಯ ಶಿಕ್ಷಕಿಯನ್ನು ಬ್ಯಾಡರಹಳ್ಳಿ ಠಾಣೆ ಪೊಲೀಸರು ಬಂಧಿಸಿದ್ದಾರೆ. ಅಂದ್ರಹಳ್ಳಿ ಶಾಲೆಯ ಮುಖ್ಯ ಶಿಕ್ಷಕಿ ಲಕ್ಷ್ಮಿದೇವಮ್ಮ ಬಂತರು. ಈ ಪ್ರಕರಣವನ್ನು ಗಂಭೀರವಾಗಿ ಪರಿಗಣಿಸಿದ ಸರ್ಕಾರ ಲಕ್ಷಿ ದೇವಮ್ಮ ಅವರನ್ನು ಅಮಾನತುಗೊಳಿಸಿದೆ. ಯಶವಂತಪುರ ವಿಧಾನಸಭಾ ಕ್ಷೇತ್ರದಲ್ಲಿರುವ ಅಂದ್ರಹಳ್ಳಿಯ ಶಾಲೆಯಲ್ಲಿ ಮಕ್ಕಳಿಂದಲೇ ಶಿಕ್ಷಕರು ಶಾಲೆಯ ಶೌಚಾಲಯವನ್ನು ಬ್ಲೀಚಿಂಗ್ ಪೌಡರ್ ಹಾಗೂ ಆ್ಯಸಿಡ್ ಹಾಕಿಸಿ ಸ್ವಚ್ಚಗೊಳಿಸುತ್ತಿದ್ದ ವಿಡಿಯೋ ಸಾಮಾಜಿಕ ಜಾಲತಾಣದಲ್ಲಿ ಹರಿದಾಡಿತ್ತು. ಈ ಬಗ್ಗೆ ವಿಷಯ ತಿಳಿದ ಮಕ್ಕಳ ಪೋಷಕರು ಶಾಲೆ ಮುಂದೆ ಜಮಾಯಿಸಿ ಶಿಕ್ಷಕರ ವರ್ತನೆ ಬಗ್ಗೆ ಆಕ್ರೋಶ ವ್ಯಕ್ತಪಡಿಸಿ ಪ್ರತಿಭಟನೆಗಿಳಿದರು. ಸುದ್ದಿ ತಿಳಿಯುತ್ತಿದ್ದಂತೆ ಬಿಇಒ ಆಂಜನಪ್ಪ ಅವರು ಸ್ಥಳಕ್ಕಾಗಮಿಸಿ ಪ್ರತಿಭಟನಾಕರರ ಮನವೊಲಿಸಿ ನಂತರ ಬ್ಯಾಡರಹಳ್ಳಿ ಠಾಣೆ ಪೊಲೀಸರಿಗೆ ದೂರು ನೀಡಿದ್ದಾರೆ. ಎಫ್‌ಐಆರ್ ದಾಖಲಿಸಿಕೊಂಡಿರುವ ಪೊಲೀಸರು ಇದೀಗ ಶಾಲಾ ಮುಖ್ಯ ಶಿಕ್ಷಕಿಯನ್ನು ಬಂಧಿಸಿ ಮುಂದಿನ ಕ್ರಮ ಕೈಗೊಂಡಿದ್ದಾರೆ. ಇತ್ತೀಚೆಗೆ ಕೋಲಾರದ ಮಾಲೂರಿನ ಮೊರಾರ್ಜಿ ದೇಸಾಯಿ ಶಾಲೆಯಲ್ಲಿ ಮಕ್ಕಳನ್ನು ಮಲದ ಗುಂಡಿಗೆ ಇಳಿಸಿ ಸ್ವಚ್ಚಗೊಳಿಸಲಾಗಿದ್ದ ಪ್ರಕರಣ ಮಾಸುವ ಮುನ್ನವೇ ಸಿಲಿಕಾನ್ ಸಿಟಿಯಲ್ಲಿ ಶಾಲಾ ಮಕ್ಕಳಿಂದಲೇ ಶೌಚಾಲಯ ಸ್ವಚ್ಚಗೊಳಿಸಿರುವುದು ಬೇಸರದ ಸಂಗತಿ.

ಬೆಣ್ಣೆ ನಗರಿಯಲ್ಲಿ ಲಿಂಗಾಯತರ ಬಲ ಪ್ರದರ್ಶನ

ದಾವಣಗೆರೆ; ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾದಿಂದ ದಾವಣಗೆರೆಯಲ್ಲಿ ನಡೆಯುತ್ತಿರುವ 24ನೇ ಮಹಾ ಅಧಿವೇಶನಕ್ಕೆ ನಾಡಿನ ಎಲ್ಲಾ ದಿಕ್ಕುಗಳಿಂದಲೂ ವೀರಶೈವ ಲಿಂಗಾಯತ ಸಮಾಜಬಾಂಧವರು ಆಗಮಿಸಿದ್ದಾರೆ. ದಾವಣಗೆರೆ ಎಲ್ಲಾ ಅಧಿವೇಶನಗಳಿಗೆ ಅದೃಷ್ಟದ ಊರಾಗಿದ್ದು, ಯಾವುದೇ ರಾಜಕೀಯ ಆಟಗಳು ಮೊದಲು ಇಲ್ಲೇ ಪ್ರಾರಂಭವಾಗಲಿದೆ. ಇನ್ನು ಪ್ರಮುಖ ರಾಜಕಾರಣಿಗಳು ದಾವಣಗೆರೆಗೆ ಬಂದಿದ್ದು, ಶ್ರೀಗಳ ಪೋಟೋಗಳಿಗಿಂತ ರಾಜಕೀಯ ನಾಯಕರ ಫ್ಲೆಕ್ಸ್ ಗಳು ರಾರಾಜಿಸುತ್ತಿವೆ. ಒಟ್ಟಾರೆ ದೇವನಗರಿಯಲ್ಲಿ ಲಿಂಗಾಯಿತರ ಶಕ್ತಿ ಪ್ರದರ್ಶನ ನಡೆಯಲಿದ್ದು, ಎಲ್ಲರ ಚಿತ್ತ ಬೆಣ್ಣೆನಗರಿ ದಾವಣಗೆರೆಯತ್ತ ನೆಟ್ಟಿದೆ.

ಆಲ್ ಇಂಡಿಯಾ ಎಸ್ಎಸ್ಕೆ ಸಮಾಜದ ಕ್ರಿಕೆಟ್ ಟೋರ್ನಾಮೆಂಟ್

ಗದಗ : ಕ್ರೀಡೆಗಳು ಯುವಕರನ್ನು ದೈಹಿಕವಾಗಿ, ಮಾನಸಿಕವಾಗಿ ಸದೃಡ ಮಾಡುತ್ತವೆ ಹಾಗೂ ಪ್ರತಿದಿನ ಕ್ರೀಡೆಗಳಲ್ಲಿ ಪಾಲ್ಗೊಳ್ಳುವದರಿಂದ ಹೆಚ್ಚು ಆರೋಗ್ಯವಂತರಾಗುತ್ತೆವೆ ಎಂದು ರಿಯಲ್ ಎಸ್ಟೇಟ್ ಉದ್ಯಮಿ ಹಾಗೂ ಎಸ್.ಎಸ್.ಕೆ. ಸಮಾಜದ ಯುವ ಮುಖಂಡ ರಾಘು ಭರಾಡ ಹೇಳಿದರು.

ಅವರು ನಗರದ ವಿದ್ಯಾದಾನ ಸಮಿತಿ ಹೈಸ್ಕೂಲ್ ಮೈದಾನದಲ್ಲಿ ಸಹಸ್ರಾರ್ಜುನ ಕ್ರಿಕೆಟ್ ಕ್ಲಬ್ ಗದಗ, ಎಸ್.ಎಸ್.ಕೆ ಸಮಾಜ ಪಂಚ ಟ್ರಸ್ಟ್ ಕಮೀಟಿ ಗದಗ, ತರುಣ ಸಂಘ, ಮಹಿಳಾ ಮಂಡಳದ ಸಹಯೋಗದಲ್ಲಿ ನಡೆಯುತ್ತಿರುವ ಆಲ್ ಇಂಡಿಯಾ ಎಸ್ಎಸ್ಕೆ ಸಮಾಜದ ಕ್ರಿಕೆಟ್ ಟೋರ್ನಾಮೆಂಟ್‌ನಲ್ಲಿ ಮುಖ್ಯ ಅತಿಥಿಗಳಾಗಿ ಪಾಲ್ಗೊಂಡು ಮಾತನಾಡಿದರು. ಇನ್ನೋರ್ವ ಮುಖ್ಯ ಅತಿಥಿ ದತ್ತಾ ಡೆವಲಪರ್ಸ್ ಪಾಲುದಾರರಾದ ಸಂತೋಷ ಚೆನ್ನಪ್ಪನವರ ಮಾತನಾಡಿ, ಎಸ್.ಎಸ್.ಕೆ ಸಮಾಜದ ಯುವಕರು ಆಲ್ ಇಂಡಿಯಾ ಕ್ರಿಕೆಟ್ ಪಂದ್ಯಾವಳಿಯನ್ನು ಹಮ್ಮಿಕೊಂಡು ಇತರರಿಗೆ ಮಾದರಿಯಾಗಿದ್ದಾರೆ ಎಂದು ಹೇಳಿದರು. ಎಸ್.ಎಸ್.ಕೆ.ಸಮಾಜದ ಮುಖಂಡರಾದ ರಾಜು ಬದಿ ಅವರು ಮಾತನಾಡಿ, ಇಂದು ಯುವಕರು ದುಶ್ಚಟಗಳಿಗೆ ದಾಸರಾಗಿ ತಮ್ಮ ಆರೋಗ್ಯವನ್ನು ಹಾಳು ಮಾಡಿಕೊಳ್ಳುತ್ತಿರುವದರಿಂದ ಯುವಕರು ದುಶ್ಚಟಗಳನ್ನು ದೂರುಮಾಡಿ ಕ್ರೀಡೆಗಳ ಮೂಲಕ ತಮ್ಮ ಆರೋಗ್ಯವನ್ನು ಕಾಪಾಡಿಕೊಳ್ಳಬೇಕೆಂದು ಹೇಳಿದರು. ಇದಕ್ಕೂ ಮುನ್ನ ನಡೆದ ಸೋಲಾಪೂರ ನಮೋ ಸಿಸಿ ಹಾಗೂ ಬೆಳಗಾವಿ ಸಹಸ್ರಾರ್ಜುನ ಸಿಸಿ ತಂಡಗಳ ನಡುವೆ ನಡೆದ ಪಂದ್ಯದಲ್ಲಿ ವಿಜೇತ ಬೆಳಗಾವಿ ಸಹಸ್ರಾರ್ಜುನ ಸಿಸಿ ತಂಡದ ಆಟಗಾರ ಕಿರಣ ಭರಾಡೆ ಅವರಿಗೆ ಪಂದ್ಯಶ್ರೇಷ್ಠ ಪ್ರಶಸ್ತಿ ಪಡೆದರು. ಈ ಸಂದರ್ಭದಲ್ಲಿ ಟೋರ್ನಾಮೆಂಟ್‌ನ ಪ್ರಾಯೋಜಕರಾದ ಉದ್ಯಮಿ ರಾಮಚಂದ್ರ ಶಿದ್ಲಿಂಗ, ವಿಜಯ ಬೋಚಗೇರಿ, ನಾಗರಾಜ ಖೋಡೆ, ಯುವ ಮುಖಂಡ ಶ್ರೀಕಾಂತ ಬಾಕಳೆ ಸೇರಿದಂತೆ ಮುಂತಾದವರು ಇದ್ದರು. ಈ ಕಾರ್ಯಕ್ರಮದಲ್ಲಿ ಪ್ರವೀಣ ಜಿತೂರಿ ಸ್ವಾಗತಿಸಿದರು. ಸೋಮು ಅಂಗಡಿ ನಿರೂಪಿಸಿದರು.

ಎಸ್ಎಸ್ಎಲ್‌ಸಿ ವಿದ್ಯಾರ್ಥಿಗಳಿಗೆ ಇಂಗ್ಲೀಷ್ ವಿಷಯದ ಫೋನ್ ಇನ್ ಕಾರ್ಯಕ್ರಮ

ವಿಜಯಪುರ: ಇಂಗ್ಲೀಷ್ ವಿಷಯದ ವ್ಯಾಕರಣ ಮತ್ತು ಪತ್ರಲೇಖನ ಪ್ಯಾರಾಗ್ರಾಫ್, ಪ್ರಬಂಧ ಬರವಣಿಗೆ ಹಾಗೂ ವಿಷಯ ಕರಗತ ಮಾಡಿಕೊಳ್ಳುವುದೂ ಸೇರಿದಂತೆ ತಮ್ಮ ಶೈಕ್ಷಣಿಕ ಸಮಸ್ಯೆಗಳಿಗೆ ವಿದ್ಯಾರ್ಥಿಗಳು ಸಂಪನ್ಮೂಲ ಶಿಕ್ಷಕರಿಂದ ಪರಿಹಾರ ಪಡೆದುಕೊಂಡರು. ಶಿಕ್ಷಕರು ವಿಷಯ ಸಮಸ್ಯೆ ಸೂಚಿಸುವುದರ ಜೊತೆಗೆ ಆತ್ಮವಿಶ್ವಾಸದ ಪಾಠ ಮಾಡಲಾಯಿತು ಎಂದು ಶಾಲಾ ಶಿಕ್ಷಣ ಹಾಗೂ ಸಾಕ್ಷರತಾ ಇಲಾಖೆಯ ಉಪ ನಿರ್ದೇಶಕ ಎನ್.ಎಚ್.ನಾಗೂರ ತಿಳಿಸಿದ್ದಾರೆ.

ಶಾಲಾ ಶಿಕ್ಷಣ ಹಾಗೂ ಸಾಕ್ಷರತಾ ಇಲಾಖೆಯಿಂದ ಜಿಲ್ಲೆಯ ಎಸ್ಸೆಸ್ಸೆಲ್ಸಿಯ ವಿದ್ಯಾರ್ಥಿಗಳಿಗಾಗಿ ಶುಕ್ರವಾರ ಸಂಜೆ 6 ರಿಂದ ರಾತ್ರಿ 8.30ರವರೆಗೆ ಇಂಗ್ಲೀಷ್ ವಿಷಯದ ಕುರಿತಾಗಿ ನಡೆದ ಫೋನ್ ಇನ್ ಕಾರ್ಯಕ್ರಮದಲ್ಲಿ 2 ಗಂಟೆಗಳ ಅವಧಿಯಲ್ಲಿ 325 ವಿದ್ಯಾರ್ಥಿಗಳು

ಕೇಳಿದ 458 ಪ್ರಶ್ನೆಗಳಿಗೆ ವಿಷಯ ಶಿಕ್ಷಕರು ಪರಿಹಾರ ಸೂಚಿಸಿದರು.

ವಿದ್ಯಾರ್ಥಿಗಳು ಕೇಳುವ ಪ್ರಶ್ನೆಗಳಿಂದ ವಿದ್ಯಾರ್ಥಿಗಳಲ್ಲಿ ಕಲಿಕೆಯ ಹಂಬಲ ಹೆಚ್ಚಾಗುತ್ತಿದೆ. ಕೆಲ ಸಣ್ಣ ಪುಟ್ಟ ಸಮಸ್ಯೆಗಳಿಗೆ ಪರಿಹಾರ ಬೋಧನೆಯಿಂದ ಮತ್ತಷ್ಟು ವಿಷಯ ಕರಗತವಾಗಿ ಅವರ ಕಲಿಕಾ ಮಟ್ಟ ಹೆಚ್ಚಾಗುತ್ತದೆ. ಜಿಲ್ಲಾಧಿಕಾರಿಗಳು ಹಾಗೂ ಜಿಪಂ ಸಿಇಒ ಅವರ ಮಾರ್ಗದರ್ಶನದಲ್ಲಿ ನಡೆಯುತ್ತಿರುವ ಯಶಸ್ವಿ ಕಾರ್ಯಕ್ರಮವೆನಿಸಿದೆ. ಈಗಾಗಲೇ ವಿಜ್ಞಾನ ವಿಷಯದಲ್ಲಿ 438, ಗಣಿತದಲ್ಲಿ 425 ವಿದ್ಯಾರ್ಥಿಗಳು ಫೋನ್ ಇನ್ ಕಾರ್ಯಕ್ರಮದ ಮೂಲಕ ತಮ್ಮ ಸಮಸ್ಯಗೆಳಿಗೆ ಪರಿಹಾರ ಕಂಡುಕೊಂಡಿದ್ದಾರೆ ಎಂದು ಅವರು ತಿಳಿಸಿದ್ದಾರೆ.

ಈ ಕಾರ್ಯಕ್ರಮದಲ್ಲಿ ಪಿ. ಕುಂಬಾರ್, ಆರ್. ವಿ. ಕುಲಕರ್ಣಿ ಶ್ರೀಮತಿ ಆರ್. ಎಸ್.ಕೊರೆಗೊಳ್, ಎಸ್.ಎ ಕಮತಗಿ, ಪಿ. ಬಿ. ಕುಲಕರ್ಣಿ, ವಿ. ಎಸ್. ಬಶೆಟ್ಟಿ, ಪಿ. ಎಮ್ ಪಾಟೀಲ್ ಹಾಗೂ ಎಸ್. ವೈ ನಾಯಕ ಅವರೂ ಸೇರಿದಂತೆ 9 ಜನ ಶಿಕ್ಷಕರು ಇಂಗ್ಲೀಷ್ ವಿಷಯದ ಸಂಪನ್ಮೂಲ ವ್ಯಕ್ತಿಗಳು, ಹಾಗೂ ಇಂಗ್ಲೀಷ್ ವಿಷಯದ ಫೋನ್ ಇನ್ ಕಾರ್ಯಕ್ರಮದ ಸಂಯೋಜಕರೂ ಆದ ಬಸವನ ಬಾಗೇವಾಡಿಯ ಕ್ಷೇತ್ರ ಶಿಕ್ಷಣಾಧಿಕಾರಿ ವಸಂತ ರಾಠೋಡ,ಇಂಗ್ಲೀಷ್ ವಿಷಯ ಪರಿವೀಕ್ಷಕರಾದ ಪಿ.ಕೆ.ರಾದಾರ, ವಿಜ್ಞಾನ ವಿಷಯ ಪರಿವೀಕ್ಷಕರಾದ ಎಸ್.ಎಸ್. ತಳ್ಳಳ್ಳಿ, ಉರ್ದು ಶಿಕ್ಷಣ ಸಂಯೋಜಕರಾದ ಝಡ್.ಎ.ಸತಾರೇಕರ, ಬಸವರಾಜ ನಾಗೂರ ಸೇರಿದಂತೆ ಸಂಪನ್ಮೂಲ ಶಿಕ್ಷಕರು ಉಪಸ್ಥಿತರಿದ್ದರು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಕದಂಬ ಸೈನ್ಯಯ ಪ್ರಶಸ್ತಿ ಪ್ರಧಾನ ಸಮಾರಂಭ

ವಿಜಯಪುರ: ಕರ್ನಾಟಕ ದೀಕ್ಷಾಬದ್ಧ ಕನ್ನಡ ಸಂಘಟನೆ ಕದಂಬ ಸೇನೆ ವಾರ್ಷಿಕ ವಿವಿಧ ಪ್ರಶಸ್ತಿ ಪ್ರಧಾನ ಸಮಾರಂಭವು ಉತ್ತರ ಕನ್ನಡ ಜಿಲ್ಲೆ ಸಿದ್ದಾಪುರ ತಾಲೂಕಿನ ಕನ್ನಡಾಂಬೆಯ ಪುಣ್ಯಭೂಮಿ ಭುವನೇಶ್ವರಿಯ ಸನ್ನಿಧಾನದಲ್ಲಿ 2023ನೇ ಸಾಲಿನ ಪ್ರಶಸ್ತಿ ಸಮಾರಂಭವು 23 ಡಿಸೆಂಬರ್ 2023 ರಂದು ಜಾರಗಿತು

ಈ ಸಂದರ್ಭದಲ್ಲಿ ವಿಜಯಪುರ ಜಿಲ್ಲೆಯಿಂದ ತಲಕಾಡು ಗಂಗ ರತ್ನ ರಾಜ್ಯ ಪ್ರಶಸ್ತಿಗೆ ಭಾಜನರಾದ ವಿಜಯಪುರ ಜಿಲ್ಲೆಯ ಮಲ್ಲಿಕಾರ್ಜುನ್ ಶಿವಗೊಂಡ ಭೂಸಗೊಂಡ ಹಾಗೂ

ಪ್ರದೀಪ್ ಚನ್ನಬಸಪ್ಪ ಪಾಟೀಲ್ ಇವರುಗಳಿಗೆ ಪ್ರಶಸ್ತಿ ಪ್ರಧಾನ ಮಾಡಿ ಗೌರವಿಸಲಾಯಿತು. ಈ ಸಂದರ್ಭದಲ್ಲಿ ಸಿದ್ದಾಪುರ ಸಿರ್ಸಿ ಮತಕ್ಷೇತ್ರದ ಶಾಸಕ ಭೀಮಾ ನಾಯಕ್ ಉದಯಕುಮಾರ್ ಕಾನಳ್ಳಿ ಕದಂಬ ಸೇನೆ ರಾಜ್ಯಾಧ್ಯಕ್ಷರು ಬೇಕ್ರಿ ರಮೇಶ್ ಉಪಾಧ್ಯಕ್ಷ ದೇವನಹಳ್ಳಿ ದೇವರಾಜ್ ರಾಜ್ಯ ಸಂಚಾಲಕ ಶಿವ್ ಕುಮಾರ್ ರಾಜ್ಯ ಕಾರ್ಯದರ್ಶಿ ಎನ್ ಸಿ ಕಾಂಬಳೆ ಹಾಗೂ ರಾಜ್ಯದ ವಿವಿಧ ಜಿಲ್ಲೆಯ ಅಧ್ಯಕ್ಷರು ಹಾಗೂ ಪದಾಧಿಕಾರಿಗಳು ಕದಂಬ ಸೈನಿಕರು ಉಪಸ್ಥಿತರಿದ್ದರು ಅದರಂತೆ ವಿಜಯಪುರ ಜಿಲ್ಲೆ ಯ ಅಧ್ಯಕ್ಷ ವಿನಾಯಕ್ ಸೊಂಡೂರ್ ಬಸವರಾಜ್ ಲಗಳಿ ಇರ್ಫಾನ್ ಬಿಳಗಿ ಮುಂತಾದವರು ಸಮಾರಂಭ ದಲ್ಲಿ ಪಾಲ್ಗೊಂಡಿದ್ದರು.

ಚಿಣ್ಣರ ಚಾವಡಿ ಕನ್ನಡ ಸಾಹಿತ್ಯ ಪರಷತ್ತಿನ ಶಾಲಾ ವಿದ್ಯಾರ್ಥಿ ಘಟಕ ಉದ್ಘಾಟನೆ

ಲಕ್ಷ್ಮೇಶ್ವರ: ತಾಲೂಕ ಕನ್ನಡ ಸಾಹಿತ್ಯ ಪರಿಷತ್ತು ಲಕ್ಷ್ಮೇಶ್ವರ ವತಿಯಿಂದ ಮೊರಾರ್ಜಿ ದೇಸಾಯಿ ವಸತಿ ಶಾಲೆ ಗೊಜನೂರಿನಲ್ಲಿ ಹಮ್ಮಿಕೊಂಡ ಕರ್ನಾಟಕ ನಾಮಕರಣದ ಸುವರ್ಣ ಸಂಭ್ರಮ ಕಾರ್ಯಕ್ರಮ ಮಾಲಿಕೆಯ ಐದನೇ ಸಂಚಿಕೆಯಾದ "ಚಿಣ್ಣರ ಚಾವಡಿ" ಕಾರ್ಯಕ್ರಮದಲ್ಲಿ ಕನ್ನಡ ಸಾಹಿತ್ಯ ಪರಿಷತ್ತಿನ ಶಾಲಾ ವಿದ್ಯಾರ್ಥಿ ಘಟಕವನ್ನು ಉದ್ಘಾಟಿಸಿ ಮಾತನಾಡಿದ ಕೆ.ಎ.ಎಸ್ ಅಧಿಕಾರಿ, ಕೃಷಿ ಮಾರಾಟ ಇಲಾಖೆಯ ಸಹಾಯಕ ನಿರ್ದೇಶಕ ನಿಜಲಿಂಗಪ್ಪ ತೋಟದರವರು "ತಂದೆ ಜನಕ,ತಾಯಿ ಆಮ್ಲಜನಕ. ಇಬ್ಬರೂ ಮಕ್ಕಳ ಸರ್ವತೋಮುಖ ಅಭಿವೃದ್ಧಿಯಲ್ಲಿ ಸಮಾನವಾದ ಪಾತ್ರದ ನಿರ್ವಹಿಸುತ್ತಾರೆ. ಅದನ್ನು ಪಾಲಕರು ಕಲಿತಿರಬೇಕು ಹಾಗೂ ಮಕ್ಕಳಿಗೆ ಅದರ ಅರಿವಿರಬೇಕು" ಎಂದು ಅಭಿಪ್ರಾಯಪಟ್ಟರು. ಚಿಣ್ಣರ ಚಾವಡಿ ಕಾರ್ಯಕ್ರಮದಲ್ಲಿ ಮಕ್ಕಳ ಸರ್ವಾಂಗೀಣ ಅಭಿವೃದ್ಧಿಯಲ್ಲಿ ತಂದೆಯ ಪಾತ್ರ ಹೆಚ್ಚೋ? ತಾಯಿಯ ಪಾತ್ರ ಹೆಚ್ಚೋ ಎಂಬ ವಿಷಯದ ಮೇಲೆ ಚಿಣ್ಣರ ವಿಚಾರ ಕಲರವ ಏರ್ಪಡಿಸಲಾಗಿತ್ತು. ಪ್ರಮಾಣ



ಪತ್ರ ವಿತರಿಸಿ ಮಾತನಾಡಿದ ಗೊಜನೂರಿನ ಮೊರಾರ್ಜಿ ದೇಸಾಯಿ ವಸತಿ ಶಾಲೆಯ ಪ್ರಾಚಾರ್ಯ ಎನ್.ಕೆ.ಹತ್ತಿಕಾಳ ಮಾತನಾಡಿ "ಅಕ್ಕಿಗುಂದದಂತಹ ಒಂದು ಸಣ್ಣ ಗ್ರಾಮದ ಸಾಮಾನ್ಯ ಕುಟುಂಬದ ನಿಜಲಿಂಗಪ್ಪ ತೋಟದ ಇಂದು ಕೆ.ಎ.ಎಸ್ ಅಧಿಕಾರಿಯಾಗಿ ಉನ್ನತ ಗೌರವ ಪಡೆಯುತ್ತಾರೆ ಎಂದರೆ ಅದಕ್ಕೆ ಶಿಕ್ಷಣವೇ ಕಾರಣ" ಎಂದು ಹೇಳಿದರು. ಪ್ರಾಸ್ತಾವಿಕವಾಗಿ ಮಾತನಾಡಿದ ಕನ್ನಡ ಸಾಹಿತ್ಯ ಪರಿಷತ್ತು ಲಕ್ಷ್ಮೇಶ್ವರ ತಾಲೂಕ ಘಟಕದ ಅಧ್ಯಕ್ಷ ಈಶ್ವರ ಮೆಡ್ಲೇರಿ "ಲಕ್ಷ್ಮೇಶ್ವರ ತಾಲೂಕ ಕನ್ನಡ ಸಾಹಿತ್ಯ ಪರಿಷತ್ತಿನ ಚಟುವಟಿಕೆಗಳನ್ನು ಗ್ರಾಮಮಟ್ಟದಲ್ಲಿ ವಿಶೇಷವಾಗಿ ಹಮ್ಮಿಕೊಳ್ಳಲಾಗುತ್ತಿದೆ. ಕನ್ನಡ ಮತ್ತು ಕನ್ನಡತನದ ಸಂಸ್ಕೃತಿಯನ್ನು ಶಾಲಾ ಪ್ರಯೋಗವಾಗಿ ತಾಲೂಕ ಘಟಕದ ವತಿಯಿಂದ ಶಾಲೆಗಳಲ್ಲಿ ವಿದ್ಯಾರ್ಥಿ ಘಟಕಗಳನ್ನು ಸ್ಥಾಪಿಸಲಾಗುತ್ತಿದೆ" ಎಂದರು. ಗೊಜನೂರ ಗ್ರಾಮ ಪಂಚಾಯಿತಿ ಅಧ್ಯಕ್ಷೆ ಶ್ರೀಮತಿ ನೀಲವ್ವ ಮಾದರ ಕಾರ್ಯಕ್ರಮ ಉದ್ಘಾಟಿಸಿದರು. ಉಪಾಧ್ಯಕ್ಷ ಮಹಾಂತಗೌಡ ಪಾಟೀಲ, ಸರಕಾರಿ ಪ್ರೌಢಶಾಲೆ ಗೊಜನೂರಿನ ಮುಖ್ಯೋಪಾಧ್ಯಾಯನಿ ಶ್ರೀಮತಿ ಗೀತಾ ಪೂಜಾರ, ಸರಕಾರಿ ಮಾದರಿ ಪ್ರಾಥಮಿಕ ಶಾಲೆ ಗೊಜನೂರಿನ ಮುಖ್ಯೋಪಾಧ್ಯಾಯ ಬಿ.ಎಚ್.ನಡುವಿನಮನಿ,ಸಾಹಿತಿ ಹಾಗೂ ಕನ್ನಡಪ್ರಭ ವರದಿಗಾರ ಅಶೋಕ ಸೊರಟೂರ, ಸಾಹಿತಿ ಹಾಗೂ ವಕೀಲರಾದ ಬಸವರಾಜ ಸಂಶಿ ಮುಖ್ಯ ಅತಿಥಿಗಳಾಗಿ ಭಾಗವಹಿಸಿ ಮಾತನಾಡಿದರು. ಮೊರಾರ್ಜಿ ದೇಸಾಯಿ ವಸತಿ ಶಾಲೆ ಗೊಜನೂರಿನ ಕನ್ನಡ ಶಿಕ್ಷಕಸಾಹಿತಿ ಶಿವಾನಂದ ಮಾಯಪ್ಪನವರ "ಚಿಣ್ಣರ ಚಾವಡಿ" ನಿರ್ವಹಿಸಿದರು. 10 ವಿದ್ಯಾರ್ಥಿಗಳು ಇತ್ತಂಡಗಳಾಗಿ ಭಾಗವಹಿಸಿ ಅತ್ಯಂತ ಪರಿಣಾಮಕಾರಿಯಾಗಿ ತಮ್ಮ ವಿಷಯವನ್ನು ಮಂಡಿಸಿದರು.ಬಹಳ ಅದ್ಭುತವಾಗಿ ಸವಾಲಿಗೆ ಪಾಟಿ ಸವಾಲುಗಳನ್ನು ವಿದ್ಯಾರ್ಥಿಗಳು ಹಾಕುತ್ತಿದ್ದುದು ಸಭಿಕರಲ್ಲಿ ವಿಶೇಷ ಮಚ್ಚುಗೆಗೆ ಪಾತ್ರವಾಯಿತು. ಅವರೆಲ್ಲ ಚಪ್ಪಾಳೆ ತಟ್ಟಿ ಸಂಭ್ರಮಿಸಿ ಪ್ರೋತ್ಸಾಹಿಸಿದರು. ಕ.ಸಾ.ಪ ವಿದ್ಯಾರ್ಥಿ ಘಟಕದ ನೂತನ ಪದಾಧಿಕಾರಿಗಳಿಗೆ ಪ್ರಮಾಣ ಪತ್ರವನ್ನು ವಿತರಿಸಲಾಯಿತು. ಚಿಣ್ಣರ ಚಾವಡಿ ಯಶಸ್ವಿಗೊಳಿಸಿದ ವಿದ್ಯಾರ್ಥಿಗಳಿಗೆ ಅಭಿನಂದನಾ ಪತ್ರವನ್ನು ನೀಡಲಾಯಿತು.

ಕೊರೊನಾ ತಡೆಗೆ ಸನ್ನದ್ಧರಾಗಲು ಅಧಿಕಾರಿಗಳಿಗೆ ಸಚಿವರ ಸೂಚನೆ

ಕೊಪ್ಪಳ: ಹಿಂದುಳಿದ ವರ್ಗಗಳ ಕಲ್ಯಾಣ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಶಿವರಾಜ ತಂಗಡಗಿ ಅವರು ಡಿಸೆಂಬರ್ 23ರಂದು ಆರೋಗ್ಯ ಇಲಾಖೆಯ ಅಧಿಕಾರಿಗಳೊಂದಿಗೆ ಸಭೆ ನಡೆಸಿ ಕೊರೊನಾ ಹಿನ್ನೆಲೆಯಲ್ಲಿ ಜಿಲ್ಲಾಡಳಿತ ಹಾಗೂ ಆರೋಗ್ಯ ಇಲಾಖೆಯು ತೆಗೆದುಕೊಂಡ ಮುಂಜಾಗ್ರತಾ ಕ್ರಮಗಳ ಬಗ್ಗೆ ಮಾಹಿತಿ ಪಡೆದರು.ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ನಡೆದ ಸಭೆಯಲ್ಲಿ ಒಂದು ಗಂಟೆಗು ಹೆಚ್ಚು ಕಾಲ ಅಧಿಕಾರಿಗಳೊಂದಿಗೆ ವಿವಿಧ ವಿಷಯಗಳ ಬಗ್ಗೆ ಚರ್ಚಿಸಿದ ಸಚಿವರು, ಕೋವಿಡ್–19ನೆ ತಳಿಯಾದ ಒಮಿಕ್ರಾನ್ ಸಬ್‌ವೇರಿಯಂಟ್ ಜೆಎನ್–1 ಎನ್ನುವ ವೈರಾಣು ಈಗಾಗಲೇ ಸಿಂಗಪುರ, ಇಂಡೋನೇಶಿಯಾ, ಮಲೇಶಿಯಾ ಮತ್ತು ಚೈನಾ ದೇಶಗಳಲ್ಲಿ ಕಾಣಿಸಿಕೊಂಡಿದೆ. ಈಗಾಗಲೇ ಗೋವಾ, ಕೇರಳ ಮತ್ತು ತಮಿಳುನಾಡು ರಾಜ್ಯಗಳಲ್ಲಿ ಪ್ರಕರಣಗಳು ವರದಿಯಾಗಿವೆ. ಈ ಹಿನ್ನೆಲೆಯಲ್ಲಿ ಕೊರೊನಾ ವೈರಾಣು ಸಮುದಾಯದಲ್ಲಿ ಹರಡುವ ಸಾಧ್ಯತೆ ಇದ್ದು, ಇದನ್ನು

ತಡೆಗಟ್ಟಲು ಜಿಲ್ಲಾಡಳಿತ ಹಾಗೂ ಆರೋಗ್ಯ ಇಲಾಖೆಯು ಸನ್ನದ್ಧವಾಗಬೇಕು ಎಂದು ನಿರ್ದೇಶನ ನೀಡಿದರು. ಕೊರೊನಾ ಬಗ್ಗೆ ಯಾರು ಕೂಡ ನಿರ್ಲಕ್ಷ್ಯ ಮಾಡಬಾರದು. ಸಂಶಯಾಸ್ಪದ ಪ್ರಕರಣಗಳು ಕಂಡುಬಂದಲ್ಲಿ ವಿಳಂಬ ಮಾಡದೇ ಪರೀಕ್ಷೆಗೊಳಪಡಿಸುವ ಕಾರ್ಯವನ್ನು ನಿಯಮಿತವಾಗಿ ನಡೆಸಬೇಕು ಎಂದರು.ಆಸ್ಪತ್ರೆಗಳಲ್ಲಿ ಔಷಧಿ ಸೇರಿದಂತೆ ಪಿಪಿಇ ಕಿಟ್ಸ್, ಎನ್95 ಮಾಸ್ಕಗಳ ಕೊರತೆಯಾಗಬಾರದು. ಈ ನಿಟ್ಟಿನಲ್ಲಿ ಪತ್ರ ಬರೆದು ಅಗತ್ಯ ಪ್ರಮಾಣದಲ್ಲಿ ಔಷಧಿ, ಪಿಪಿಇ ಕಿಟ್, ಮಾಸ್ಕ್, ಹ್ಯಾಂಡ್ ಗ್ಲೌಸ್ ಸೇರಿದಂತೆ ಎಲ್ಲ ಬಗೆಯ ವೈದ್ಯಕೀಯ ಪರಿಕರಗಳು ಸಾಕಷ್ಟು ಪ್ರಮಾಣದಲ್ಲಿ ಲಭ್ಯತೆ ಇರುವಂತೆ ನೋಡಿಕೊಳ್ಳಬೇಕು ಎಂದು ಸಚಿವರು ಆರೋಗ್ಯ ಇಲಾಖೆಯ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಹಿರಿಯರಿಗೆ ಸಂದೇಶ ರವಾನಿಸಿ: ಜಿಲ್ಲೆಯ ಹಿರಿಯ ನಾಗರಿಕರಿಗೆ ಈ ವೇಳೆ ಮಹತ್ವದ ಸಂದೇಶ ಕೂಡಲೇ ರವಾನೆಯಾಗಬೇಕು. 60 ವರ್ಷ ಮೇಲ್ಪಟ್ಟವರು, ಎದೆಹಾಲುಣಿಸುವ ತಾಯಂದಿರು, ಗರ್ಭಿಣಿಯರು ಮತ್ತು ಕಿಡ್ನಿ, ಹೃದಯ, ಲೀವರ್, ಕ್ಯಾನ್ಸರ್ ಸೇರಿದಂತೆ ನಾನಾ ಗಂಭೀರ ಕಾಯಿಲೆಗಳಿಂದ ಬಳಲುವವರು ಹೊರಾಂಗಣ ಪ್ರದೇಶಗಳಿಗೆ ತೆರಳಿದಾಗ ಕಡ್ಡಾಯ ಮಾಸ್ಕ ಧರಿಸಬೇಕು. ಅಗತ್ಯ ಗಾಳಿ ಬೆಳಕು ಇಲ್ಲದ ಮತ್ತು ಹೆಚ್ಚು ಜನ ಸಂದಣಿ ಇರುವ ಪ್ರದೇಶಗಳಿಗೆ ತೆರಳಕೂಡದು ಎನ್ನುವ ಸಂದೇಶವು ಆರೋಗ್ಯ ಇಲಾಖೆಯಿಂದ ಹೋಗಬೇಕು ಎಂದು ಸಚಿವರು ಇದೆ ವೇಳೆ ಸಲಹೆ ಮಾಡಿದರು.ಶಾಸಕರಾದ ರಾಘವೇಂದ್ರ ಹಿಟ್ನಾಳ ಅವರು ಮಾತನಾಡಿ, ಜ್ವರ ಕೆಮ್ಮ ನೆಗಡಿ ಇತ್ಯಾದಿ ಉಸಿರಾಟದ ತೊಂದರೆ ಸೋಂಕಿನ ಲಕ್ಷಣಗಳನ್ನು ಹೊಂದಿದವರು ತಕ್ಷಣವೇ ಅಗತ್ಯ ವೈದ್ಯಕೀಯ ಸಲಹೆ ಪಡೆಯಬೇಕು. ಮೂಗು ಬಾಯಿ ಮುಚ್ಚುವಂತೆ ಮಾಸ್ಕ ಧರಿಸಬೇಕು. ವೈಯಕ್ತಿಕ ಶುಚಿತ್ವ, ಆಗಾಗ್ಗೆ ಕೈ ತೊಳೆಯುವುದು ಇತ್ಯಾದಿಗಳನ್ನು ಸಾರ್ವಜನಿಕರು ಈ ಸಂದರ್ಭದಲ್ಲಿ ಪಾಲನೆ ಮಾಡಬೇಕು ಎನ್ನುವಂತಹ ಅಂಶಗಳ ಬಗ್ಗೆ ಆರೋಗ್ಯ ಇಲಾಖೆಯಿಂದ ಜನಜಾಗೃತಿ ಮೂಡಿಸುವ ಕಾರ್ಯ ಅತೀ ತುರ್ತಾಗಿ ನಡೆಯುವಂತಾಗಬೇಕು ಎಂದು ಸಲಹೆ ಮಾಡಿದರು.ಕೋವಿಡ್ ಹೊಸ ತಳಿಯಿಂದಾಗಿ ಜಿಲ್ಲೆಯಲ್ಲಿ ಯಾವುದೇ ರೀತಿಯ ಸಾವಿನ ಪ್ರಕರಣಗಳು ವರದಿಯಾಗಿಲ್ಲ. ಪಕ್ಕದ ರಾಜ್ಯದಲ್ಲಿ ಕೇಸ್‌ಗಳು ಕಂಡು ಬಂದಿದ್ದರಿಂದ ಮುಂಜಾಗ್ರತೆ ವಹಿಸಲು ಆರೋಗ್ಯ ಇಲಾಖೆಗೆ ಸೂಚಿಸಲಾಗಿದೆ. ಸಂಶಯಾಸ್ಪದ ವ್ಯಕ್ತಿಗಳು ಕಂಡು ಬಂದಲ್ಲಿ ಅಂತವರನ್ನು ಕಡ್ಡಾಯ ಪರೀಕ್ಷೆಗೊಳಪಡಿಸಿ ಅವಶ್ಯಕತೆ ಇದ್ದಲ್ಲಿ ಹೋಮ್ ಐಸೋಲೇಶನ್‌ಗೆ ಕಳುಹಿಸಲು ಕ್ರಮ ವಹಿಸಬೇಕು.

ವಿಶ್ವಕ್ಕೆ ಪ್ರಾಮುಖ್ಯತೆ ಹೊಂದಿದ ಕ್ಷೇತ್ರ ಕೃಷಿಕ್ಷೇತ್ರ

ವಿಜಯಪುರ: ಕೃಷಿಕ್ಷೇತ್ರವು ಅತ್ಯಂತ ಪ್ರಾಮುಖ್ಯತೆ ಹೊಂದಿದ್ದು ವಿಶ್ವಕ್ಕೆ ಅಗ್ರಮಾನ್ಯವಾಗಿದೆ ಅಂತಹ ರೈತನ ವಿಶ್ವವೆ ನೆನಪಿಸುವಂತಿದೆ ಇಂತಹ ಕ್ಷೇತ್ರಕ್ಕೆ ಎಂದು ಅನ್ಯಾಯವಾಗಬಾರದು ಎಂದು ಕೃಷಿ ಮತ್ತು ರೈತ ಕಲ್ಯಾಣ ಮಂತ್ರಾಲಯದ ಚೇರಮನ್ನರಾಡಾ. ಅಶೋಕ ದಳವಾಯಿ ಇಂದು ಇಲ್ಲಿ ಹೇಳಿದರು.ಶ್ರೀ ಕಾಳಿದಾಸ ಶಿಕ್

ಹಿಜಾಬ್ ನಿಷೇಧ ವಾಪಸ್, ಸಿದ್ದರಾಮಯ್ಯರಿಂದ ಶಿಕ್ಷಣ ಕ್ಷೇತ್ರ ಕಲುಷಿತಗೊಳಿಸುವ ಕೆಲಸ

ಬೆಂಗಳೂರು: ಮುಖ್ಯಮಂತ್ರಿ ಸಿದ್ದರಾಮಯ್ಯನವರು ನಿನ್ನೆ ಹಿಜಾಬ್ ವಿಚಾರದಲ್ಲಿ ಬೇಜವಾಬ್ದಾರಿ ಹೇಳಿಕೆ ನೀಡಿದ್ದಾರೆ. ಮತ್ತೆ ಹಿಜಾಬ್ಗೆ ಅವಕಾಶ ಮಾಡಿಕೊಡುವುದಾಗಿ ಹೇಳುವ ಮೂಲಕ ಶಿಕ್ಷಣ ಕ್ಷೇತ್ರವನ್ನು ಕಲುಷಿತಗೊಳಿಸುವ ಕೆಲಸಕ್ಕೆ ಸ್ವತಃ ಮುಖ್ಯಮಂತ್ರಿಗಳೇ ಕೈಹಾಕಿರುವುದು ಈ ನಾಡಿನ ಒಂದು ದುರದೃಷ್ಟ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಅವರು ಟೀಕಿಸಿದರುದೆಹಲಿಯಲ್ಲಿ ಶನಿವಾರ ಮಾಧ್ಯಮ ಗೋಷ್ಠಿಯಲ್ಲಿ ಮಾತನಾಡಿದ ಅವರು,

ಸಿಎಂ ಅವರಿಂದ ಇಂಥ ಹೇಳಿಕೆಯನ್ನು ಯಾರೂ ನಿರೀಕ್ಷೆ ಮಾಡಿರಲಿಲ್ಲ.

ಕನಿಷ್ಠ ಪಕ್ಷ ಶಾಲಾ, ಕಾಲೇಜುಗಳಿಗೆ ಹೋಗುವ ಮಕ್ಕಳನ್ನಾದರೂ ರಾಜಕೀಯದಿಂದ ದೂರ ಇಡುವ ಕೆಲಸವನ್ನು ರಾಜ್ಯ ಸರಕಾರ ಮಾಡಬೇಕಿತ್ತು. ಒಂದೆಡೆ ಹಿಜಾಬ್ಗೇ ಅವಕಾಶ ಮಾಡಿಕೊಡುವುದಾಗಿ ಹೇಳುವ ಮುಖ್ಯಮಂತ್ರಿಗಳು, ಮತ್ತೊಂದು ಕಡೆ ಇದೇ ಕಾಂಗ್ರೆಸ್ ಸರಕಾರ ಅಧಿಕಾರದಲ್ಲಿ ಇದ್ದಾಗ ಪರೀಕ್ಷೆಗೆ ಹೋಗುವ ವಿದ್ಯಾರ್ಥಿ, ವಿದ್ಯಾರ್ಥಿನಿಯರ, ತಾಯಂದಿರ ತಾಳಿ, ಕಾಲುಂಗುರ ತೆಗೆದಿಟ್ಟು ಹೋಗಲು



ತಿಳಿಸುತ್ತದೆ.ರಾಜ್ಯ ಸರಕಾರದ ಈ ನಡವಳಿಕೆ ನಿಜವಾಗಿಯೂ ತಲೆತಗ್ಗಿಸುವಂಥದ್ದು. ಬಿಜೆಪಿ, ಇದನ್ನು ಬಲವಾಗಿ ಖಂಡಿಸುತ್ತದೆ ಮಾತೆತ್ತಿದರೆ ಕಾಂಗ್ರೆಸ್ಸಿಗರು ಅಲ್ಪಸಂಖ್ಯಾತರ ಕುರಿತು ಮಾತ್ರ ಮಾತನಾಡುತ್ತಾರೆ. ಕಾಂಗ್ರೆಸ್ಸಿಗರು, ತುಷ್ಟೀಕರಣ ನೀತಿಯನ್ನು ತಮ್ಮದಾಗಿಸಿಕೊಂಡಿದ್ದಾರೆ. ಇದನ್ನು ಉಗ್ರವಾಗಿ ಖಂಡಿಸುತ್ತೇವೆ ಎಂದ ಅವರು, ಕಾಂಗ್ರೆಸ್ ಪಕ್ಷವು ಸ್ವಾತಂತ್ರ್ಯದ ನಂತರ 50ರಿಂದ 60 ವರ್ಷಗಳ ಕಾಲ ದೇಶ, ರಾಜ್ಯವನ್ನು ಆಳಿದೆ. ಆದರೂ, ಅಲ್ಪಸಂಖ್ಯಾತರಲ್ಲಿ ಶೇ 50ರಷ್ಟು ಜನರು ಶಿಕ್ಷಣದಿಂದ ವಂಚಿತರಾಗಿದ್ದಾರೆ ಎಂದರೆ ಅದಕ್ಕೆ ಯಾರು ಹೊಣೆಗಾರರು ಎಂದು ಮುಖ್ಯಮಂತ್ರಿಗಳು ಉತ್ತರ ಕೊಡಬೇಕು ಎಂದು ಆಗ್ರಹಿಸಿದರು.ಈ ದೇಶದ ಹೆಮ್ಮೆಯ ಪ್ರಧಾನಮಂತ್ರಿ ನರೇಂದ್ರ ಮೋದಿಯವರು ಅಲ್ಪಸಂಖ್ಯಾತ ಮಹಿಳೆಯರನ್ನು ಕೂಡ ದೇಶದ ಜನತೆ ಗೌರವದಿಂದ ಕಾಣಬೇಕು; ಪ್ರತಿಯೊಬ್ಬ ಅಲ್ಪಸಂಖ್ಯಾತ ಮಹಿಳೆಯೂ ಗೌರವ,

ಸ್ವಾಭಿಮಾನದಿಂದ ಬಾಳಿ ಬದುಕಬೇಕೆಂಬ ದೃಷ್ಟಿಕೋನದೊಂದಿಗೆ ತ್ರಿವಳಿ ತಲಾಖ್ ಅನ್ನು ನರೇಂದ್ರ ಮೋದಿಯವರು ರದ್ದು ಮಾಡಿದ್ದಾರೆ. ನೀವೇನು ಮಾಡಿದ್ದೀರಿ? ಎಂದು ವಿಜಯೇಂದ್ರ ಅವರು ಪ್ರಶ್ನಿಸಿದರು. ಅಲ್ಪಸಂಖ್ಯಾತರ ಕುರಿತು ಕೇವಲ ಭಾಷಣ ಮಾಡುತ್ತೀರಿ. ಅವರಿಗಾಗಿ ಯಾವುದಾದರೂ ಯೋಜನೆ ರೂಪಿಸುವ ಮೂಲಕ ಮೇಲೆತ್ತಿದ್ದೀರಾ ಎಂದು ಕೇಳಿದರು. ಅಲ್ಪಸಂಖ್ಯಾತರು ನಿರುದ್ಯೋಗ ಸಮಸ್ಯೆ ಸೇರಿ ಅನೇಕ ಸಮಸ್ಯೆಗಳನ್ನು ಎದುರಿಸಲು ಕಾಂಗ್ರೆಸ್ಸೇ ಕಾರಣ ಎಂದು ಆಕ್ಷೇಪ ವ್ಯಕ್ತಪಡಿಸಿದರು.ಕಾಂಗ್ರೆಸ್ಸಿಗರು ಅವತ್ತಿನಿಂದ ಇಂದಿನವರೆಗೂ ಒಡೆದು ಆಳುವ ನೀತಿಯನ್ನು ತಮ್ಮದಾಗಿ ಮಾಡಿಕೊಂಡಿದ್ದಾರೆ. ಬ್ರಿಟಿಷರ ಒಡೆದಾಳುವ ನೀತಿಯನ್ನು, ಪರಂಪರೆಯನ್ನು ಮುಂದುವರೆಸಿದ ಕೀರ್ತಿ ಕಾಂಗ್ರೆಸ್ ಪಕ್ಷಕ್ಕೆ ಸಲ್ಲುತ್ತದೆ ಎಂದರು. ಹಿಂದೆ

5 ವರ್ಷ ಪರಿಪೂರ್ಣವಾಗಿ ನೀವು ಮುಖ್ಯಮಂತ್ರಿಯಾಗಿ ಆಡಳಿತ ನಡೆಸಿದ್ದೀರಿ. ಮತ್ತೆ ಅಧಿಕಾರ ಸಿಗುವುದು ಕಷ್ಟ ಎಂಬ ಸಂದರ್ಭದಲ್ಲಿ ವೀರಶೈವ ಲಿಂಗಾಯತ ಪ್ರತ್ಯೇಕ ಧರ್ಮ ಎಂದು ಒಡೆಯಲು ಮುಂದಾಗಿ ಬೆಂಕಿ ಹಚ್ಚುವ ಕೆಲಸ ಮಾಡಿದ್ದೀರಿ ಎಂದು ಕಟುವಾಗಿ ರಾಜ್ಯದಲ್ಲಿ ಇವತ್ತು ಭೀಕರ ಬರಗಾಲವಿದೆ. ರೈತರ ಸಂಕಷ್ಟಕ್ಕೆ ಸರಕಾರ ಸ್ಪಂದಿಸುತ್ತಿಲ್ಲ. ಆ ಜವಾಬ್ದಾರಿ ಮರೆತ ರಾಜ್ಯ ಸರಕಾರವು,. ಲೋಕಸಭಾ ಚುನಾವಣೆಯ ವಿಚಾರದಲ್ಲಿ ಕಾಂಗ್ರೆಸ್ ಪಕ್ಷ 20 ಕ್ಷೇತ್ರ ಗೆಲ್ಲುವ ಕನಸು ಕಾಣುತ್ತಿದೆ.

"ಯುವನಿಧಿ" ಯೋಜನೆ ನೋಂದಣಿ ಡಿ.26ರಿಂದ ಆರಂಭ

ಗದಗ: ಸರಕಾರದ ಪಂಚ ಗ್ಯಾರಂಟಿ ಯೋಜನೆಗಳಲ್ಲಿ ಒಂದಾಗಿರುವ ನಿರುದ್ಯೋಗಿ ಪದವೀಧರರಿಗೆ ನಿರುದ್ಯೋಗ ಭತ್ಯೆ ನೀಡುವ "ಯುವನಿಧಿ" ಯೋಜನೆಗೆ ಅರ್ಹ ಫಲಾನುಭವಿಗಳು ಡಿಸೆಂಬರ್ 26 ರಿಂದ ಸೇವಾಸಿಂಧು ಪೋರ್ಟಲ್ ಮೂಲಕ ಅರ್ಜಿಗಳನ್ನು ಸಲ್ಲಿಸಬಹುದು ಎಂದು ಜಿಲ್ಲಾಧಿಕಾರಿ ವೈಶಾಲಿ ಎಂ. ಎಲ್ ಅವರು ತಿಳಿಸಿದ್ದಾರೆ. ಈ ಕುರಿತು ಪ್ರಕಟಣೆ ನೀಡಿರುವ ಅವರು, ಗದಗ ಜಿಲ್ಲೆಯಲ್ಲಿ 2023 ರ ವರ್ಷದಲ್ಲಿ ತೇರ್ಗಡೆಯಾದ ದಿನಾಂಕದಿಂದ 180 ದಿನಗಳು ಕಳೆದರೂ ಉದ್ಯೋಗ ಲಭಿಸದ ಪದವೀಧರರು ಮತ್ತು ಡಿಪ್ಲೋಮಾ ಪಡೆದ ನಿರುದ್ಯೋಗಿ ವಿದ್ಯಾವಂತರಿಗೆ ಕರ್ನಾಟಕ ಯುವನಿಧಿ ಯೋಜನೆಯಡಿ ನಿರುದ್ಯೋಗ ಭತ್ಯೆಯನ್ನು ಪಾವತಿಸಲಾಗುವುದು.

ಡಿಸೆಂಬರ್ 26 ರಿಂದ ಸೇವಾಸಿಂಧು ಪೋರ್ಟಲ್ ಮೂಲಕ ಈ ಯೋಜನೆಗೆ

ಅರ್ಜಿಗಳನ್ನು ಸಲ್ಲಿಸಬಹುದು. ಜನವರಿ 2024 ರಿಂದ ಯೋಜನೆ ಜಾರಿಗೊಳ್ಳಲಿದ್ದು, ಅರ್ಹ ನಿರುದ್ಯೋಗಿಗಳಿಗೆ ಪ್ರತಿ ತಿಂಗಳು ನಿರುದ್ಯೋಗ ಭತ್ಯೆ ದೊರೆಯಲಿದೆ. ಪದವೀದರರಿಗೆ ರೂ 3000/- ಮಾಸಿಕ ನಿರುದ್ಯೋಗ ಭತ್ಯೆಯನ್ನು ಹಾಗೂ ಡಿಪ್ಲೋಮಾ ತೇರ್ಗಡೆಯಾದವರಿಗೆ ರೂ 1500/- ಮಾಸಿಕ ನಿರುದ್ಯೋಗ ಭತ್ಯೆಯನ್ನು ಆದಾರ್ ಜೋಡಣೆಯ ಅಭ್ಯರ್ಥಿಗಳಿಗೆ ಬ್ಯಾಂಕ್ ಖಾತೆಗೆ ನೇರ ನಗದು ವರ್ಗಾವಣೆ ಮೂಲಕ ವಿತರಿಸಲು ಕ್ರಮ ಕೈಗೊಳ್ಳಲಾಗುತ್ತಿದೆ.

ಯುವ ನಿಧಿ ನೋಂದಣಿಗೆ ಚಾಲನೆ: ಯುವನಿಧಿ ಯೋಜನೆಗೆ ದಿ: 26-12-2023 ರ ಮಂಗಳವಾರದಂದು ವಿಧಾನಸೌಧದ ಬ್ಯಾಂಕ್ವೆಟ್ ಹಾಲನಲ್ಲಿ ಮುಖ್ಯಮಂತ್ರಿಗಳ ಘನ ಉಪಸ್ಥಿತಿಯಲ್ಲಿ ಹಾಗೂ ಇತರೆ ಎಲ್ಲಾ ಸಚಿವ ಸಂಪುಟದ ಸಚಿವರುಗಳು, ವಿಧಾನ ಸಭಾ ಸದಸ್ಯರುಗಳು, ವಿಧಾನ ಪರಿಷತ್ ಸದಸ್ಯರುಗಳು ಮತ್ತು ಇತರೆ ಗಣ್ಯ ಮಾನ್ಯರುಗಳ ಉಪಸ್ಥಿತಿಯಲ್ಲಿ ನೋಂದಣಿ ಪ್ರಕಿಂಪೆ ಚಾಲನಾ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ.

ನೋಂದಣಿ ಪ್ರಕ್ರಿಯೆ: ಅರ್ಹ ನಿರುದ್ಯೋಗಿಗಳು ಸೇವಾಸಿಂಧು ಪೋರ್ಟಲ್ https://sevasindhugs.karnataka.gov.in ಗೆ ಭೇಟಿ ನೀಡಿ ನೋಂದಣಿ ಮಾಡಬಹುದು. ಇದಲ್ಲದೇ ಕರ್ನಾಟಕ ಒನ್, ಗ್ರಾಮಒನ್ ಮತ್ತು ಬಾಪೂಜಿ ಸೇವಾ ಕೇಂದ್ರಗಳಲ್ಲಿ ಕೂಡ ಅರ್ಜಿ ಸಲ್ಲಿಸಬಹುದು.

ರಾಷ್ಟ್ರೀಯ ಮಟ್ಟದ ಹಾಕಿ ಕ್ರೀಡಾ ಸ್ಪರ್ಧೆಗೆ ವಿದ್ಯಾರ್ಥಿಗಳು ಆಯ್ಕೆ

ಧಾರವಾಡ: ಕಳೆದ ಅಕ್ಟೋಬರ 8 ರಿಂದ 12 ರವರೆಗೆ ಕೊಡಗಿನಲ್ಲಿ ಜರುಗಿದ 14 ವರ್ಷ ವಯೋಮಿತಿಯ ಬಾಲಕಿಯರ ರಾಜ್ಯ ಮಟ್ಟದ ಹಾಕಿ ಪಂದ್ಯಾವಳಿಯಲ್ಲಿ ಧಾರವಾಡ ಜಿಲ್ಲಾ ಕ್ರೀಡಾ ಶಾಲೆಯ ಹಾಕಿ ಕ್ರೀಡಾಪಟುಗಳು ಪ್ರಥಮ ಸ್ಥಾನ ಪಡೆದಿದ್ದಾರೆ. ಮಧ್ಯಪ್ರದೇಶ ರಾಜ್ಯದ ಗ್ವಾಲೀಯರ್ ದಲ್ಲಿ ಡಿಸೆಂಬರ್ 28, 2023 ರಿಂದ ಆಯೋಜಿಸಿರುವ ರಾಷ್ಟ್ರ ಮಟ್ಟದ ಪಂದ್ಯಾವಳಿಯಲ್ಲಿ ವಿಜೇತ ಕ್ರೀಡಾಪಟುಗಳು ಭಾಗವಹಿಸಲಿದ್ದಾರೆ. ರಾಷ್ಟ್ರಮಟ್ಟದ ಪಂದ್ಯಾವಳಿಗೆ ಆಯ್ಕೆ ಆಗಿರುವ ಕ್ರೀಡಾಪಟುಗಳನ್ನು ಇಂದಿನ ಜಿಲ್ಲಾ ಜನತಾ ದರ್ಶನ ಸಂದರ್ಭದಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಸಂತೋಷ್ ಲಾಡ್ ಅವರು ಕ್ರೀಡಾ ಪರಿಕರಗಳ ಕಿಟ್ ನೀಡಿ, ಸನ್ಮಾನಿಸಿ, ಗೌರವಿಸಿದರು. ಈ ಸಂದರ್ಭದಲ್ಲಿ ಜಿಲ್ಲಾಧಿಕಾರಿ ಗುರುದತ್ತ ಹೆಗಡೆ, ಜಿಲ್ಲಾ ಪಂಚಾಯತ ಸಿಇಓ ಸ್ವರೂಪ ಟಿ.ಕೆ., ಎಸ್.ಪಿ.ಡಾ.ಗೋಪಾಲ ಬ್ಯಾಕೊಡ, ಮಹಾನಗರ ಪಾಲಿಕೆ ಆಯುಕ್ತ ಡಾ. ಈಶ್ವರ ಉಳ್ಳಾಗಡ್ಡಿ, ಕ್ರೀಡಾ ಇಲಾಖೆ ಸಹಾಯಕ ನಿರ್ದೇಶಕ ಸದಾನಂದ ಅಮರಾಪೂರ, ಹಾಕಿ ತರಬೇತಿದಾರ ಚಂದ್ರಶೇಕರ ನಾಯ್ಕರ್, ವ್ಯವಸ್ಥಾಪಕ ಎಸ್.ಜಿ.ಭಾವಿಕಟ್ಟಿ ಸೇರಿದಂತೆ ಇತರ ಜಿಲ್ಲಾಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು. ರಾಷ್ಟ್ರಮಟ್ಟಕ್ಕೆ ಆಯ್ಕೆಯಾದ ಕ್ರೀಡಾಪಟುಗಳು: ಪೂಜಾ ಧಾರವಾಡ, ಶೃತಿ ಪೂಜಾರಿ, ರಾಜೇಶ್ವರಿ ಬೂದನ್ನವರ, ಶಿಲ್ಪಾ ಕಣಜನವರ, ಪ್ರೀತಿ ನಿಲಗಡ್ಡಿ, ಸಂಜನಾ ಹುಗ್ಗೆಣ್ಣವರ, ಬಸಮ್ಮಾ ಹುಗ್ಗೆಣ್ಣವರ,ಸುಕನ್ಯಾ ಜಕ್ಕಣ್ಣವರ, ನಿಶ್ಚಿತ ನಾಯ್ಕರ್, ಸೌಂದರ್ಯಾ ಲಮಾಣಿ.

ಸಮಾಜದ ಅಭಿವೃದ್ಧಿಗೆ ಸಂಘ: ಸಂಸ್ಥೆಗಳು ನಿರಂತರ ಶ್ರಮಿಸಲಿ

ಬೈಲಹೊಂಗಲ: ಸಮಾಜದ ಅಭಿವೃದ್ಧಿಯಲ್ಲಿ ಸಂಘ-ಸಂಸ್ಥೆಗಳ ಪಾತ್ರ ಹಿರಿದ್ದಾಗಿದ್ದು ನಿಸ್ವಾರ್ಥ ಸೇವೆಯಿಂದ ಜನ ಕಲ್ಯಾಣ ಮಾಡಿ ಮನ್ನಣೆ ಪಡೆಯಬೇಕೆಂದು ಮಾಜಿ ಶಾಸಕ ಡಾ.ವಿಶ್ವನಾಥ ಪಾಟೀಲ ಹೇಳಿದರು. ಅವರು ತಾಲೂಕಿನ ಮಲ್ಲಮ್ಮನ ಬೆಳವಡಿ ಗ್ರಾಮದ ರಾಣಿ ಮಲ್ಲಮ್ಮ ಸ್ಮಾರಕ ಭವನದಲ್ಲಿ ಈಚೆಗೆ ನಡೆದ ಹಾಯ್ ಮಲಪ್ರಭಾ ನೂತನ ಸಮಾಜ ಸೇವಾ ಸಂಘ ಉದ್ಘಾಟಿಸಿ ಮಾತನಾಡಿ, ಸಂಘ ಕಟ್ಟುವದು ದೊಡ್ಡದಲ್ಲ, ಆ ಸಂಘವನ್ನು ಸಮಾಜಕ್ಕೆ ಅರ್ಪಿಸಿ ಸೇವೆಗೈಯುವದು ಶ್ರೇಷ್ಠವಾಗಿದೆ. ರಾಷ್ಟ್ರ ನಿರ್ಮಾಣದಲ್ಲಿ ಯುವಕರ ಪಾತ್ರ ಮಹತ್ವದ್ದಾಗಿದ್ದು ಸಂಘಗಳಲ್ಲಿ ಸಮನ್ವಯತೆಯಿಂದ ಸಾಗಿದಾಗ ಮಾತ್ರ ಉದ್ದೇಶ ಸಾಧಕ ಪಡೆಯಲು ಸಾಧ್ಯವೆಂದರು. ಶಾಸಕ ಮಹಾಂತೇಶ ಕೌಜಲಗಿ ನೂತನ ವರ್ಷದ ಕ್ಯಾಲೆಂಡರ ಬಿಡುಗಡೆಗೊಳಿಸಿ ಮಾತನಾಡಿ, ಸಂಘ-ಸಂಸ್ಥೆಗಳು ನೊಂದವರ ಧ್ವನಿಯಾಗಬೇಕು. ಅನೇಕ ಯೋಜನೆಗಳನ್ನು ಹಮ್ಮಿಕೊಂಡು ಜನೋಪಕಾರಿಯಾಗಿ ಕಾರ್ಯನಿರ್ವಹಿಸಬೇಕು. ಅನೇಕರು ಸಮಾಜದಲ್ಲಿ ಎಲೆಮರೆ ಕಾಯಿಯಂತೆ ಸೇವೆಗೈಯುತ್ತಿದ್ದು ಅಂತಹ ಸಾಧಕರನ್ನು ಗುರಿತಿಸಿ ಗೌರವಿಸುವ ಕಾರ್ಯವಾಗಬೇಕೆಂದರು. ವೇ.ಮೂ.ಬಸಯ್ಯ ವಿರಕ್ತಮಠ ಸಾನಿಧ್ಯ, ಗ್ರಾ.ಪಂ.ಅಧ್ಯಕ್ಷ ಚಂದ್ರಶೇಖರಯ್ಯ ಕಾರಿಮನಿ ಸಭೆಯ ಅಧ್ಯಕ್ಷತೆ ವಹಿಸಿದ್ದರು. ಸಂಘದ

ಗೌರವ ಕಾರ್ಯದರ್ಶಿ ರಾಚಯ್ಯ ರೊಟ್ಟಯ್ಯನವರ, ಶ್ರೀ ಸೋಮೇಶ್ವರ ಸಕ್ಕರೆ ಕಾರ್ಖಾನೆಯ ನಿರ್ಧೇಶಕ ಕಾರ್ತಿಕ ಮಲ್ಲೂರ, ಗ್ರಾ.ಪಂ.ಸದಸ್ಯ ಬಿ.ಜಿ.ದೇಗಾಂವಿ, ಎಪಿಎಂಸಿ ಮಾಜಿ ನಿರ್ಧೇಶಕ ಗದಗಯ್ಯ ರೊಟ್ಟಯ್ಯನವರ, ಮುಸ್ಲಿಂ ಜಮಾವತ್ ಕಮೀಟಿ ಅಧ್ಯಕ್ಷ ಜೈನೂಲಸಾಬ್ ಕಿತ್ತೂರು, ಹಾಯ್ ಮಲಪ್ರಭಾ ಸಮಾಜ ಸೇವಾ ಸಂಘದ ಅಧ್ಯಕ್ಷ ಯಾಸೀನ ಕಿತ್ತೂರು, ಉಪಾಧ್ಯಕ್ಷ ಶಶಿಧರ ಪತ್ತಾರ, ಕಾರ್ಯದರ್ಶಿ ಮಹಾಂತೇಶ ಬಳಿಗಾರ, ತಾಲೂಕಾ ಕಜಾಪ ವಕ್ತಾರ ಮಹಾಂತೇಶ ರಾಜಗೋಳಿ, ನಾಗವೇಣಿ ಹೂಲಿಕೇರಿ ಮುಂತಾದವರು ಉಪಸ್ಥಿತರಿದ್ದರು. ಸಂಘದ ಅದ್ಯಕ್ಷ ಯಾಸೀನ್ ಕಿತ್ತೂರು ಸ್ವಾಗತಿಸಿದರು. ಗೌರವ ಕಾರ್ಯದರ್ಶಿ ಮಹಾಂತೇಶ ಉಪ್ಪಿನ ನಿರೂಪಿಸಿದರು. ಸೆದೆಪ್ಪ ಗುಗ್ಗರಿ ವಂದಿಸಿದರು. ಬಡ ಜನರಿಗೆ ಹಾಸಿಗೆ, ವೈದ್ಯಕೀಯ ಕಿಟ್ಟು, ಬಡ ವಿದ್ಯಾರ್ಥಿಗಳಿಗೆ ಶೈಕಣೀಕ ಸಾಮಗ್ರಿಗಳನ್ನು ಇದೇ ಸಂದರ್ಭದಲ್ಲಿ ವಿತರಿಸಲಾಯಿತು. ವಿವಿಧ ಕ್ಷೇತ್ರದ ಸಾಧಕರಿಗೆ ಪ್ರಶಸ್ತಿಗಳನ್ನು ವಿತರಿಸಲಾಯಿತು. ಶಾರದಾ ಸಂಗೀತ ಶಾಲೆಯ ಮಂಜು ಮುರಗೋಡ ಇವರಿಂದ ಸಂಗೀತ ಸೇವೆ ಜರುಗಿತು.

ಜನವರಿಯಿಂದ ತಾಲೂಕು ಮಟ್ಟದಲ್ಲೂ ಜನತಾ ದರ್ಶನ: ಬರಗಾಲ ಸ್ಥಿತಿ ತೀವ್ರವಾಗುವ ಸಂಭವ

ಧಾರವಾಡ: ಜಿಲ್ಲಾ ಮಟ್ಟದ ಜನತಾ ದರ್ಶನ ಕಾರ್ಯಕ್ರಮಗಳನ್ನು ಯಶಸ್ವಿಯಾಗಿ ಆಯೋಜಿಸಲಾಗುತ್ತಿದ್ದು, ಸರಕಾರ ಹಂತದಲ್ಲಿ ಪರಿಹರಿಸಬೇಕಾದ ಮತ್ತು ಕೊರ್ಟ, ಪಾಲಸಿ ಸಂಬಂದಿ ಅಹವಾಲು ಹೊರತುಪಡಿಸಿ ಬಹುತೇಕ ಅಹವಾಲುಗಳನ್ನು ಸ್ಥಳಿಯವಾಗಿ ಪರಿಹರಿಸಲಾಗಿದೆ. ಬರುವ ಜನವರಿಯಿಂದ ಸಾರ್ವಜನಿಕರ ಅನಕೂಲಕ್ಕಾಗಿ ತಾಲೂಕು ಹಂತದಲ್ಲಿ ಜನತಾ ದರ್ಶನ ಆಯೋಜಿಸಲಾಗುವುದು ಎಂದು ಕಾರ್ಮಿಕ ಸಚಿವ ಹಾಗೂ ಧಾರವಾಡ ಜಿಲ್ಲಾ ಉಸ್ತುವಾರಿ ಸಚಿವ ಸಂತೋಷ ಲಾಡ ಅವರು ಹೇಳಿದರು. ಉಳಿದ ಅರ್ಜಿಗಳನ್ನು ಪರಿಹರಿಸಲು ಸಂಬಂಧಿಸಿದ ಇಲಾಖೆಗಳಿಗೆ ರವಾನಿಸಲಾಗಿದೆ. ಜಿಲ್ಲೆಯಲ್ಲಿ ಜನತಾ ದರ್ಶನ ಕಾರ್ಯಕ್ರಮ ಯಶಸ್ವಿಯಾಗಿ ಜರುಗುತ್ತಿದ್ದು, ಸಮಸ್ಯೆ ಅಹವಾಲುಗಳ ಸಲ್ಲಿಕೆ ಕಡಿಮೆ ಆಗಿದೆ ಎಂದು ಅವರು ಹೇಳಿದರು.ಸಾರ್ವಜನಿಕರಿಗೆ ಮತ್ತು ಬಾಧಿತ ವ್ಯಕ್ತಿಗಳಿಗೆ ಇನ್ನೂ ಅನಕೂಲವಾಗಿ, ಅವರ ಸಮಸ್ಯೆಗಳನ್ನು

ಸ್ಥಳದಲ್ಲಿ ಪರಿಹರಿಸಲು ಸಹಾಯವಾಗುವಂತೆ ಬರುವ ಜನವರಿಯಿಂದ ತಾಲೂಕುಮಟ್ಟದಲ್ಲಿ ಜನತಾದರ್ಶನ ಆಯೋಜಿಸಲಾಗುತ್ತದೆ ಎಂದು ಅವರು ತಿಳಿಸಿದರು. ಮುಂದಿನ ಆರು ತಿಂಗಳು ಕುಡಿಯುವ ನೀರು, ಮೇವು, ಉದ್ಯೋಗ ಸಮಸ್ಯೆ ಬರಬಹುದು. ಇದಕ್ಕೆ ಈಗಿನಿಂದಲೇ ಅಗತ್ಯ ಸಿದ್ದತೆ ಮಾಡಿಕೊಳ್ಳಬೇಕು. ಅಗತ್ಯವಿದ್ದಲ್ಲಿ ಹೊಸ ಬೊರವೇಲ್ ಕೊರೆಸಲು ಕ್ರಮವಹಿಸಬೇಕು. ಕುಡಿಯುವ ನೀರು ಸಮಸ್ಯೆ ಇರುವ ಸಂಭವನೀಯ ಪ್ರದೇಶ ಗುರುತಿಸಿ, ಅಲ್ಲಿ ಖಾಸಗಿ ಬೊರವೇಲ್ ಅಥವಾ ಟ್ಯಾಂಕರ್ ಮೂಲಕ ನೀರು ಸರಬರಾಜು ಮಾಡಲು ಟೆಂಡರ್ ಮಾಡಿ, ಅವರಿಗೆ ಮುಂಚಿತವಾಗಿ ಆದೇಶ ನೀಡಲು ಸಚಿವರು ಸೂಚಿಸಿದರು.ಬರಗಾಲ ಸಂದರ್ಭದಲ್ಲಿ ಜಾನುವಾರಗಳಿಗೆ ಮೇವು ಕೊರತೆ ಆಗದಂತೆ ಎಚ್ಚರಿಕೆವಹಿಸಬೇಕು. ಮೇವು ಕೇಂದ್ರಗಳನ್ನು ಸ್ಥಾಪಿಸಲು ಅಗತ್ಯವಿರುವ ಸ್ಥಳಗಳನ್ನು ಗುರುತಿಸಿ, ಕ್ರಮವಹಿಸಬೇಕೆಂದು ಅಧಿಕಾರಿಗಳಿಗೆ ಸಚಿವರು ನಿರ್ದೇಶಿಸಿದರು.ಸಭೆಯಲ್ಲಿ ಜಿಲ್ಲಾಧಿಕಾರಿ ಗುರುದತ್ತ ಹೆಗಡೆ, ಉಪ ಪೊಲೀಸ ಆಯುಕ್ತ ರಾಜೀವ ಎಂ., ಪೊಲೀಸ ವರಿಷ್ಠಾಧಿಕಾರಿ ಡಾ.ಗೋಪಾಲ ಬ್ಯಾಕೋಡ, ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಸ್ವರೂಪ ಟಿ.ಕೆ., ಅಪರ ಜಿಲ್ಲಾಧಿಕಾರಿ ಗೀತಾ ಸಿ.ಡಿ., ಮಹಾನಗರ ಪಾಲಿಕೆ ಆಯುಕ್ತ ಡಾ.ಈಶ್ವರ ಉಳ್ಳಾಗಡ್ಡಿ, ಹುಬ್ಬಳ್ಳಿ ಧಾರವಾಡ ನಗರಾಭಿವೃದ್ಧಿ ಪ್ರಾಧಿಕಾರದ ಆಯುಕ್ತ ಡಾ.ಸಂತೋಷ ಬಿರಾದಾರ, ಸಾರ್ವಜನಿಕ ಶಿಕ್ಷಣ ಇಲಾಖೆ ಉಪನಿರ್ದೇಶಕ ಎಸ್.ಎಸ್.ಕೆಳದಿಮಠ,ಕೃಷಿ ಇಲಾಖೆಯ ಜಂಟಿ ನಿರ್ದೇಶಕ ಡಾ.ಕಿರಣ ಕುಮಾರ, ಜಿಲ್ಲಾ ಆರೋಗ್ಯ ಅಧಿಕಾರಿ ಡಾ. ಶಶಿ ಪಾಟೀಲ, ಜಿಲ್ಲಾ ಶಸ್ತ್ರಚಿಕಿತ್ಸಕ ಡಾ.ಸಂಗಪ್ಪ ಗಾಬಿ ಸೇರಿದಂತೆ ವಿವಿಧ ಇಲಾಖೆಗಳ ಜಿಲ್ಲಾಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು. ಮಹಾನಗರ ಸೇರಿದಂತೆ ವಿವಿಧ ತಾಲೂಕುಗಳ ಸಾರ್ವಜನಿಕರು ಜನತಾದರ್ಶನದಲ್ಲಿ ಭಾಗವಹಿಸಿ, ತಮ್ಮ ಅಹವಾಲುಗಳನ್ನು ಸಲ್ಲಿಸಿದರು.

ಸಾರ್ವಜನಿಕರಿಗೆ ತಪ್ಪು ಮಾಹಿತಿ ನೀಡಬೇಡಿ: ಜಿಲ್ಲಾಧಿಕಾರಿ ಮನವಿ

ಧಾರವಾಡ: ದಿನಾಂಕ:21/12/2023 ರಂದು ಕೆಲವು ಟಿ.ವಿ. ದೃಶ್ಯ ಮಾಧ್ಯಮಗಳಲ್ಲಿ ಮತ್ತು ದಿನಾಂಕ:22/12/2023 ರಂದು ಕೆಲವು ದಿನಪ್ರತಿಕೆಗಳಲ್ಲಿ ಧೃವ ಎಂಬ ಮಗುವಿಗೆ ಲಸಿಕೆ ನೀಡಿದ ನಂತರ ಮಗುವಿನ ಸಾವು ಸಂಭವಿಸಿದೆ ಎಂದು ವರದಿಯಾಗಿದ್ದು,

ಸಾರ್ವತ್ರಿಕ ಲಸಿಕಾ ಕಾರ್ಯಕ್ರಮದ ವೇಳಾಪಟ್ಟಿಯ ಅನುಸಾರ ಮಗುವಿಗೆ ದಿನಾಂಕ:21/12/2023 ರಂದು ಲಸಿಕೆಗಳನ್ನು ನೀಡಿಲಾಗಿದೆ. ಮತ್ತು ಇದೇ ಲಸಿಕೆಗಳನ್ನು ಅದೇ ದಿನದಂದು ಬೇರೆ ಮಕ್ಕಳಿಗೆ ಕೂಡ ನೀಡಲಾಗಿದೆ. ಆ ಎಲ್ಲ ಮಕ್ಕಳು ಆರೋಗ್ಯದಿಂದಿರುತ್ತಾರೆ.

ಆದರೆ ಮಾಧ್ಯಮದಲ್ಲಿ ಧೃವ ಎಂಬ ಮ

ವೈಯಕ್ತಿಕ ಕೆಲಸದ ನಿಮಿತ್ತ ದೆಹಲಿಗೆ ಹೋಗಿದ್ದೆ

ವಿಜಯಪುರ: ವೈಯಕ್ತಿಕ ಕೆಲಸದ ನಿಮಿತ್ತ ದೆಹಲಿಗೆ ಹೋಗಿದ್ದ ನಾನು, ಕೆಲ ಸಚಿವರು–ಸಂಸದರನ್ನು ಭೇಟಿ ಮಾಡಿದ್ದೇನೆ. ಆದರೂ ಈ ಭೇಟಿ ವೇಳೆ ಅಪಮಾನಿತವಾಗಿ ಬಂದಿದ್ದೇನೆ ಎಂದು ಬಿಂಬಿಸಿ ಮಾಧ್ಯಮಗಳು ವರದಿ ಮಾಡಿವೆ ಎಂದು ವಿಜಯಪುರ ನಗರ ಶಾಸಕ ಬಸನಗೌಡ ಪಾಟೀಲ ಯತ್ನಾಳ ಕಿಡಿಕಾ–ರಿದರು.ನಗರದಲ್ಲಿ ತಮ್ಮ ದೆಹಲಿ ಭೇಟಿ ಕುರಿತು ಮಾತನಾಡಿ ನಾನು ಯಾರ ಭೇಟಿಗಾಗಿಯೂ ದೆಹಲಿಗೆ ಹೋಗಿರಲಿಲ್ಲ. ಯಾರ ಭೇಟಿಗೂ ಸಮಯ ಕೇಳಿರಲಿಲ್ಲ, ಯಾರ ಸಮಯ ಕೇಳಿ ಹೋಗುವ ಅವಶ್ಯಕತೆಯೂ ನನಗಿಲ್ಲ. ಅತ್ಯಂತ ಅಪಮಾನಕಾರಿಯಾಗಿ, ದೈನ್ಯನಾಗಿಯೂ ಹಿಂದಿರುಗಿಲ್ಲ. ಕಾರ್ಖಾನೆ ಸ್ಥಾಪನೆ ವಿಷಯಕ್ಕೆ ಸಂಬಂಧಿಸಿ ವೈಯಕ್ತಿಕ ಕೆಲಸದ ಮೇಲೆ ದೆಹಲಿಗೆ ಹೋಗಿದ್ದೆ. ಆಗ ಕರ್ನಾಟಕದವರಾದ ಕೇಂದ್ರ ಸಚಿವರಾದ ಪ್ರಹ್ಲಾದ ಜೋಶಿ, ಶೋಭಾ ಕರಂದ್ಲಾಜೆ ಸೇರಿದಂತೆ ಕೆಲ ಸಂಸದರನ್ನು ಭೇಟಿ ಮಾಡಿದ್ದೆ ಎಂದು ವಿವ–ರಿಸಿದರು. ಕೆಲವು ಮಾಧ್ಯಮಗಳು ಬಿಜೆಪಿ ರಾಜ್ಯಾಧ್ಯಕ್ಷ ವಿಜಯೇಂದ್ರ ಅವರನ್ನು ಹೊಗಳುವ ಕೆಲಸ ಮಾಡುತ್ತಿವೆ. ಅವರು ರಾಜ್ಯಾಧ್ಯಕ್ಷರಾದ ಕಾರಣ ಲೋಕಸಭೆಯ 28 ಸ್ಥಾನಗಳಿರುವ ಕರ್ನಾಟಕದಲ್ಲಿ 25 ಸ್ಥಾನಗಳಲ್ಲಿ ಬಿಜೆಪಿ ಗೆಲ್ಲಲಿದೆ ಎಂದು ಬೇಕಾದರೂ ಹೇಳಲಿ ಎಂದು ಗೇಲಿ ಮಾಡಿದರು. ಕರ್ನಾಟಕ ಸೇರಿದಂತೆ ದೇಶದಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರನ್ನು ಅವಲಂಬಿಸಿಯೇ ಲೋಕಸಭೆ ಚುನಾವಣೆ ನಡೆಯಲಿದೆ.ಇದರಲ್ಲಿ ಯಾರ ಅಪ್ಪನದೂ ಏನೂ ಇಲ್ಲ. ಕರ್ನಾಟಕದಲ್ಲಿ ಪ್ರಧಾನಿ ಮೋದಿ ಹೊರತಾಗಿ ಇತರೆ ಯಾರ ಮುಖ ನೋಡಿಯೂ ಮತದಾರರು ಬಿಜೆಪಿ ಪಕ್ಷ ಬೆಂಬಲಿಸಲ್ಲ ಎಂದರು. ಭ್ರಷ್ಟಾಚಾರ, ಹೊಂದಾಣಿಕೆ ರಾಜಕೀಯ ಹಾಗೂ ವಂಶ ಪಾರಂಪರ್ಯ ರಾಜಕಾರಣ ವಿರುದ್ಧ ನನ್ನ ಹೋರಾಟ ಮುಂದುವರಿಯಲಿದೆ.

ಧರ್ಮಸ್ಥಳ ಗ್ರಾಮಾಭಿವೃದ್ಧಿಯೋಜನೆಯಿಂದ ಮದ್ಯವರ್ಜನ ಶಿಬಿರದ ಸಮಾರೋಪ

ಬೆಳಗಾವಿ ಹೊನಗಾ:" ದುಷ್ಟಟ ಮುಕ್ತ ಸಮಾಜಕಟ್ಟುವಲ್ಲಿ ಸಮುದಾಯಒ–ಟ್ಟುಗೂಡಿ ಕೆಲಸ ಮಾಡಿದಾಗಎಂತಾಕಠಿಣ ಕೆಲಸವನ್ನು ಸುಲಭ ಮಾಡಲು ಸಾಧ್ಯ ಈ ವ್ಯವಸ್ಥೆಯನ್ನು ಪೂಜ್ಯಧರ್ಮಾಧಿಕಾ–ರಿಡಾ. ವೀರೇಂದ್ರ ಹೆಗ್ಗಡೆಯವರ ಮಾಡಿದ್ದಾರೆ, ವ್ಯಸನ ಮುಕ್ತ ಜೀವನದಿಂದ ಮನುಷ್ಯನಿಗೆ ಸಮಾಜದಲ್ಲಿ ಹೆಚ್ಚಿನಗೌರವ ಸಿಗುತ್ತದೆ. ಮತ್ತುಅವರು ಮಾನಸಿಕ, ದೈಹಿಕ ಮತ್ತುಆರ್ಥಿಕವಾಗಿ ಸುಧಾರಣೆಯಾಗಲು ಒಳ್ಳೆಯ ಅವಕಾಶ ಸಿಗುತ್ತದೆ " ಎಂದು ವಿಜಯಾಅರ್ಥೋ ಮತ್ತುಥ–'ರ್ಮೋ ಸಂಸ್ಥೆಯ ನಿರ್ದೇಶಕರಾದಡಾ. ರವಿ ಪಾಟೀಲ್‌ರವರು ಹೇಳಿದರು. ತಾಲ್ಲೂಕಿನ ಹೊನಗಾ ಗ್ರಾಮದಡಾ. ರವಿ ಪಾಟೀಲ್‌ಆಯುರ್ವೇದಿಕ್‌ಆಸ್ಪತ್ರೆ ಹಾಗೂ ಸಂಶೋಧನಾಕೇಂದ್ರ ಹೊನಗಾದಲ್ಲಿ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿಯೋಜನೆ ಬಿಸಿ ಟ್ರಸ್ಟ್ ಬೆಳಗಾವಿ ಮತ್ತು ವಿವಿಧ ಸಂಘ ಸಂಸ್ಥೆಗಳ ಸಹಯೋಗದಲ್ಲಿಆಯೋಜಿಸಲಾದ 1770 ನೇ ಮದ್ಯವರ್ಜನ ಶಿಬಿರದಲ್ಲಿ 70 ಜನ ಶಿಬಿರಾರ್ಥಿಗಳಿಗೆ ಮದ್ಯಮುಕ್ತರನ್ನಾಗಿಸಲು 8 ದಿನಗಳ ತರಬೇತಿಯನ್ನು ನಡೆಸಿ ಸುಮಾರು 400 ಜನರಿಗೆ ನೆಮ್ಮದಿಯಜೀವನ ನಡೆಸಲು ಸಾಧ್ಯವಾಯಿತುಇದುವರೆಗೂ 1.48 ಲಕ್ಷಜನರಿಗೆ ಶಿಬಿರದ ಮೂಲಕ ನೆಮ್ಮದಿ ಜೀವನ ನಡೆಸಲು ಸಾಧ್ಯವಾಯಿತು–ಎಂದು'ಜನ'ಜಾಗೃತಿರಾಜ್ಯಾಧ್ಯಕ್ಷರಾದ 'ರಾಜಣ್ಣಕೊರವಿಯವರು ತಿಳಿಸಿದರುಮದ್ಯ–ಮಾದಕಗಳಿಂದ ದೂರವಾದರೆ ಸಮಾಜದಲ್ಲಿ ಶಾಂತಿ ನೆಲೆಸಲಿದೆ. ನಿಮ್ಮೆಲ್ಲರಆರೋಗ್ಯದ ಹಿತದೃಷ್ಟಿಯಿಂದ ಮದ್ಯವರ್ಜನ ಶಿಬಿರ ಆಯೋಜಿಸಲಾಗಿದೆ. ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದು ಮಲ್ಲಗೌಡಾ ಪಾಟೀಲ್‌ರವರು ತಿಳಿಸಿದರು ಮದ್ಯವೇಸನ 'ದಿಂದಇಡೀಕುಟುಂಬದಜೀವನ ನರಕಇದ–ರಿಂದ ಮುಕ್ತರಾದ ನೀವು ಪುಣ್ಯವಂತರು–ಎಂದು ತಿಳಿಸಿದರುಜಿಲ್ಲಾ ನಿರ್ದೇಶಕರಾದ ಸತೀಶ ನಾಯ್ಕ್‌ಅವರು ಮಾತನಾಡಿ, "ದೇಶದಆರ್ಥಿಕ ಪ್ರಗತಿಗೆ ವ್ಯಸನ ಮುಕ್ತ ಹಾಗೂ ಆರೋಗ್ಯಕರ ಸಮಾಜ ನಿರ್ಮಾಣ ವಾಗಬೇಕಿದೆ. ಆ ನಿಟ್ಟಿನಲ್ಲಿ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿಯೋಜನೆ ವತಿಯಿಂದ ಹಮ್ಮಿಕೊಂಡಿರುವ ವಿವಿಧಯೋಜನಾ ಕಾರ್ಯಗಳು ನಿಜಕ್ಕೂ ಶ್ಲಾಘನೀಯ," ಎಂದು ಹೇಳಿದರು. ಕಾರ್ಯಕ್ರಮದ ದಿವ್ಯ ಸಾನಿಧ್ಯವನ್ನು ಶ್ರೀ ಶಿವ ಸಿದ್ದ ಸೋಮೇಶ್ವರ ಶಿವಾಚಾರ್ಯ ಮಹಾ ಸ್ವಾಮಿಗಳು ಶಿಬಿರಾರ್ಥಿಗಳಿಗೆ ಆಶೀರ್ವಚನ ನೀಡಿದರುಶಿಬಿರದ ಯೋಜನಾಧಿಕಾರಿ ಭಾಸ್ಕರವರುಕಾರ್ಯಕ್ರಮದ ವಿಶೇಷತೆ ಬಗ್ಗೆ ತಿಳಿಸಿದರುಮದ್ಯವರ್ಜನ ಶಿಬಿರದ ಗೌರವಾಧ್ಯಕ್ಷಕಲ್ಲಗೌಡ ಪಾಟೀಲ್, ಸಮಿತಿಯಜಿಲ್ಲಾಅಧ್ಯಕ್ಷರಾದ ಬಸವರಾಜ ಸೊಪ್ಪಿಮಠ, ತಾಲೂಕಿನಯೋಜನಾಧಿಕಾರಿ ನಾಗರಾಜ ಹದ್ಲಿ , ಮಾಜಿಜಿಲ್ಲಾ ಪಂಚಾಯತ್ ಸದಸ್ಯರಾದ ಸಿದ್ದುಗೌಡ ಸುಣಗಾರ, ಗೌಡಪ್ಪ ಶಿವನಗೌಡ ಪಾಟೀಲ ,ಡಾ. ಚಿಂತಾಮನಿ ಕಡೋಲಿಕರ ಅಖಿಲ ಕರ್ನಾಟಕಜನಜಾಗೃತಿ ವೇದಿಕೆ ಸದಸ್ಯರಾದ ಪ್ರಭಾಕರಕುಂದುರ, ರಾಜು ಬೆಲ್ಲದ ವಿನೋದಜಗಜಂಪಿ, ಮೇಲ್ವಿಚಾರಕ ನಾಗಪ್ಪಗೌಡ, ಕೃಷಿ ಮೇಲ್ವಿಚಾರಕರಾದ ಸತೀಶಗೌಡರ, ಸಂಗೀತಾ ಪೂಜಾರ ಸಿಬಿರಾಧಿಕಾರಿಗಳು ನಾಗೇಂದ್ರಆರೋಗ್ಯ ಸಹಾಯಕಿ ಸೌಮ್ಯ, ಎಲ್ಲಾ ವಲಯದ ಮೇಲ್ವಿಚಾರಕರು, ಬೆಳಗಾವಿ ಬಿ, ಹೊನಗಾ, ಕಡೋಲಿ ವಲಯದ ಸೇವಾ ಪ್ರತಿನಿದಿಗಳು, ಸಿ ಎಸ್ ಸಿ ಸಮನ್ವಧಿಕಾರಿಜಿತೇಂದ್ರ, ಕೃಷಿ ಮೇಲ್ವಿಚಾರ ಸತೀಶಗೌಡ, ಇತರರುಇದ್ದರು. ತಾಲ್ಲೂಕಿನಯೋಜನಾಧಿಕಾರಿ ನಾಗರಾಜ ಹದ್ಲಿ ಸ್ವಾಗತಿಸಿದರು.

ವಿವಿಗೆ ಪ್ರವೇಶಾತಿ: ದಾಖಲೆ ಪರಿಶೀಲನೆ ಪೂರ್ಣ

ಕೊಪ್ಪಳ: 2023–24ನೇ ಶೈಕ್ಷಣಿಕ ಸಾಲಿನ ಕೊಪ್ಪಳ ವಿಶ್ವವಿದ್ಯಾಲಯದ ಸ್ನಾತಕೋತ್ತರ ಪದವಿಗಳ ಪ್ರವೇಶಾತಿಗೆ ಸಂಬಂಧಿಸಿದಂತೆ ಡಿಸೆಂಬರ್ 21 ಮತ್ತು ಡಿಸೆಂಬರ್ 22 ರಂದು ಮೂಲದಾಖಲೆಗಳ ಪರಿಶೀಲನೆ ಪೂರ್ಣಗೊಂಡಿದೆ. ಆಯ್ಕೆಯಾದ ವಿದ್ಯಾರ್ಥಿಗಳ ಮೆರಿಟ್ ಪಟ್ಟಿಯನ್ನು ವಿಶ್ವವಿದ್ಯಾಲಯದ ಜಾಲತಾಣ (www.koppaluniversity.ac.in)ದಲ್ಲಿ ಪ್ರಕಟಿಸಲಾಗುವುದು. ಮೆ–ರಿಟ್ ಆಧಾರಿತ ಆಯ್ಕೆಗೊಂಡ ವಿದ್ಯಾರ್ಥಿಗಳು 26ನೇ ಡಿಸೆಂಬರ್, 2023 ಮಂಗಳವಾರದಂದು (ತಮಗೆ ನಿಗದಿಪಡಿಸಿದ ಸಮಯದೊಳಗಡೆ) ವಿಶ್ವವಿದ್ಯಾಲಯಕ್ಕೆ ಬಂದು ಪ್ರವೇಶ ಪಡೆಯಲು ಸೂಚಿಸಲಾಗಿದೆ.

ಈ ಸ್ನಾತಕೋತ್ತರ ಪದವಿಗಳ ಪ್ರವೇಶಕ್ಕೆ ಸಂಬಂಧಿಸಿದಂತೆ ವಿಶ್ವವಿದ್ಯಾಲಯದ ನಿಯಮಾನುಸಾರ ಸೀಟು ಹಂಚಿಕೆ, ಪ್ರವೇಶ ಶುಲ್ಕಗಳ ವಿವರ ಮತ್ತು ಇದಕ್ಕೆ ಸಂಬಂಧಿಸಿದ ಹೆಚ್ಚಿನ ಮಾಹಿತಿಗಳನ್ನು ವಿಶ್ವವಿದ್ಯಾಲಯದ ಜಾಲತಾಣ (www.koppaluniversity.ac.in)ದಲ್ಲಿ ನೋಡಬಹುದಾಗಿದೆ ಎಂದು ಕೊಪ್ಪಳ ವಿಶ್ವವಿದ್ಯಾಲಯದ ಪ್ರಕಟಣೆ ತಿಳಿಸಿದೆ.

ಶಾಲೆ ವಿಕ್ಷಿಸಿ ಸಂಭ್ರಮಿಸಿದ ವಿದ್ಯಾರ್ಥಿಗಳು

ಕೂಡಲಸಂಗಮ: ಮಕ್ಕಳ ಪ್ರತಿಭೆ ಹೆಚ್ಚಿಸಲು ಸ್ಫೂರ್ತಿ, ಪ್ರೇರಣೆ ನೀಡುವ ಉದ್ದೇಶದಿಂದ ಜಾ–ರಿಗೆ ತಂದ ಮಾದರಿ ಶಾಲೆ ಭೇಟಿ ಕಾರ್ಯಕ್ರಮ ಅಡಿಯಲ್ಲಿ ಅವಳಿ ಜಿಲ್ಲೆಯ 9 ಪ್ರೌಢ ಶಾಲೆಯ ವಿದ್ಯಾರ್ಥಿಗಳು ಕೂಡಲಸಂಗಮ ಸರ್ಕಾರಿ ಪ್ರೌಢಶಾಲೆಗೆ ಭೇಟಿ ನೀಡಿ ಶಾಲೆಯ ವಾತಾವರಣ, ತರಗತಿಯ ಕೊಠಡಿ, ಪ್ರಯೋಗಾಲಯ, ಮೈದಾನ, ಉದ್ಯಾನವನ ವಿಕ್ಷಿಸಿ ಸಂಭ್ರಮಿಸಿದರು. ಮಾದರಿ ಶಾಲೆ ಭೇಟಿಗೆ ಬಂದ ಶಿಕ್ಷಕರು, ವಿದ್ಯಾರ್ಥಿಗಳು 10ನೇ ತರಗತಿ ವಿದ್ಯಾರ್ಥಿಗಳೊಂದಿಗೆ ಸಂವಾದ ಮಾಡಿದರು. ಪ್ರತಿ ತರಗತಿ ಕೊಠಡಿ ವಿಕ್ಷಿಸಿ ಒಳ, ಹೊರಗೆ ಅಳವಡಿಸಿದ ಚಿತ್ರಪಟ ವಿಕ್ಷಿಸಿ ಮಾಹಿತಿ ಪಡೆದರು. ಶಾಲೆಯ ಶಿಸ್ತು, ಪರಿಸರ ನೋಡಿ ಮೆಚ್ಚುಗೆ ವ್ಯಕ್ತಪಡಿಸಿದರು. 'ಕೂಡಲಸಂಗಮ ಸರ್ಕಾರಿ ಪ್ರೌಢಶಾಲೆಯು ಖಾಸಗಿ ಶಾಲೆಯನ್ನು ಮೀ–ರಿಸುವಷ್ಟು ಅಭಿವೃದ್ಧಿ ಹೊಂದಿದೆ. ಇಲ್ಲಿಯ ಶಿಸ್ತು, ವಾತಾವರಣ, ಅಧ್ಯಯನ ಕ್ರಮ, ಚಿತ್ರಪಟಗಳು, ಪ್ರಯೋಗಾಲಯ ಬಹಳ ಇಷ್ಟವಾಯಿತು' ಎಂದು ಬೀಳಗಿ ತಾಲೂಕಿನ ತೋಳಮಟ್ಟಿ ಸರ್ಕಾರಿ ಪ್ರೌಢಶಾಲೆಯ ವಿದ್ಯಾರ್ಥಿ ಅನು ಭಾವಿ ಹೇಳಿದಳು. 'ವಿಜಯಪುರ ಜಿಲ್ಲೆಯ 3, ಬಾಗಲಕೋಟೆಯ 6 ಸರ್ಕಾರಿ ಪ್ರೌಢ ಶಾಲೆಯ ಶಿಕ್ಷಕರು, ವಿದ್ಯಾರ್ಥಿಗಳು ನಮ್ಮ ಶಾಲೆಗೆ ಒಂದು ತಿಂಗಳಲ್ಲಿ ಭೇಟಿ ನೀಡಿದ್ದಾರೆ.

ಇಂದು ಉಚಿತ ಆರೋಗ್ಯ ತಪಾಸಣಾ ಶಿಬಿರ

ಮೂಡಲಗಿ : ಸ್ಥಳೀಯ ಡಾ॥ ಹೊಂಗಲ ಆಸ್ಪತ್ರೆಯಲ್ಲಿ ರವಿವಾರ ಡಿ. 24 ರಂದು ಮುಂಜಾನೆ 10 ರಿಂದ 2.00 ಗಂಟೆಯವರೆಗೆ ಉಚಿತ ಆರೋಗ್ಯ ತಪಾಸಣಾ ಶಿಬಿರ ಹಮ್ಮಿಕೊಳ್ಳಲಾಗಿದೆ ಎಂದು ಆಸ್ಪತ್ರೆಯ ವ್ಯವಸ್ಥಾಪಕ ನಿರ್ದೇಶಕ ನಿವೃತ್ತ ಉಪನ್ಯಾಸಕ ಅರ್ಜುನ ಹೊಂಗಲ ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಉಚಿತ ಆರೋಗ್ಯ ತಪಾಸಣಾ ಶಿಬಿರದಲ್ಲಿ ಸ್ತ್ರೀರೋಗ(ಹೆರಿಗೆ),ಚಿಕ್ಕ ಮಕ್ಕಳ ತಪಾಸಣೆ, ಶಸ್ತ್ರ ಚಿಕಿತ್ಸಾ ತಪಾಸಣೆ ಅಪೆಂಡಿಕ್ಸ, ಹರ್ನಿಯಾ, ಮೂಲವ್ಯಾದಿ, ಸ್ಥನ ಗಂಟು ಸಹಿತ ಇತರೆ ಶಸ್ತ್ರ ಚಿಕಿತ್ಸೆ ಸಂಬಂದಿಸಿದ ಖಾಯಿಲೆಗಳನ್ನು ರಿಯಾಯತಿ ನೀಡುವ ಮೂಲಕ ಪರಿಹರಿಸುವರು.ಶಿಬಿರದಲ್ಲಿ ಎಲಬು ಕೀಲುಗಳ ತಜ್ಞ ಡಾ. ಪ್ರವೀಣಕುಮಾರ ಹೊಂಗಲ, ನವಜಾತ ಶಿಶು ತಜ್ಞ ಡಾ. ಗೋಪಾಲ ಹೊಂಗಲ, ಹೆರಿಗೆ ಮತ್ತು ಸ್ತ್ರೀರೋಗ ತಜ್ಞೆ ಡಾ. ಲಲಿತಾ ಹೊಂಗಲ, ಜನರಲ್ ಸರ್ಜನ್ ಡಾ.ಸಚೀನ ಬೆನಚಿನಮರಡಿ ಹಾಗೂ ತಜ್ಞರು ಭಾಗವಹಿಸಿದ್ದಾರೆ. ಹೆಚ್ಚಿನ ಮಾಹಿತಿಗೆ ಗೋಕಾಕ ರಸ್ತೆ ಮೂಡಲಗಿ ಪೊಲೀಸ್ ಠಾಣೆ ಎದುರಿಗೆ ಫೋ ನಂ: 8217556986, 9148690118, 7795818483 ಸಂಪರ್ಕಿಲು ಕೋರಿದ್ದಾರೆ.

ಸಂಸತ್ತಿನಲ್ಲಿ ಸಂಸದರ ಅಮಾನತ್ತು ಖಂಡಿಸಿ ಕಾಂಗ್ರೆಸ್ ನಿಂದ ಪ್ರತಿಭಟನೆ

ಚಿಕ್ಕೋಡಿ:ಸಂಸತ್ತಿನ ಉಭಯ ಸದನಗಳಲ್ಲಿ ಸಂಸದರನ್ನು ಅಮಾನತ್ತು ಗೊಳಿಸಿದನ್ನು ಖಂಡಿಸಿ ಚಿಕ್ಕೋಡಿ ಜಿಲ್ಲಾ ಕಾಂಗ್ರೆಸ್ ಕಾರ್ಯಕರ್ತರಿಂದ ಪ್ರತಿಭಟನೆ ಜರುಗಿತು.ಪಟ್ಟಣದ ಪ್ರವಾಸಿ ಮಂದಿರದಿಂದ ಪ್ರಾರಂಭವಾದ ಪ್ರತಿಭಟನೆಯು ಕಾಲ್ನಡಿಗೆಯ ಮೂಲಕ ಬಸವ ವೃತ್ತವರೆಗೆ ಸಾಗಿ,ಮಾನವ ಸರಪಳಿ ನಿರ್ಮಿಸಿ ಕೇಂದ್ರದ ಬಿಜೆಪಿ ಸರ್ಕಾರದ ವಿರುದ್ಧ ಆಕ್ರೋಶವನ್ನು ವ್ಯಕ್ತಪಡಿಸಿದರು.ಇದೇ ಸಂಧರ್ಭದಲ್ಲಿ ಚಿಕ್ಕೋಡಿ ಜಿಲ್ಲಾ ಕಾಂಗ್ರೆಸ್ ಪಕ್ಷದ ಅಧ್ಯಕ್ಷ ಲಕ್ಷ್ಮಣರಾವ ಚಿಂಗಳೆ ಮಾತನಾಡಿ ಈ ದೇಶದಲ್ಲಿ ಕಾನೂನಾತ್ಮಕವಾಗಿ ಸಂವಿಧಾನದ ನಡೆಯುತ್ತಿಲ್ಲ.ರಾಜ್ಯಸಭೆ ಹಾಗೂ ಲೋಕಸಭೆಯಲ್ಲಿ ವಿರೋಧ ಪಕ್ಷದವರು ರಚನಾತ್ಮಕ ಪ್ರಶ್ನೆ ಕೇಳಿದಾಗ ಆಡಳಿತ ಪಕ್ಷದವರು ಉತ್ತರಸಿಗಲಾರದೇ ಸುಮಾರು 145 ಸಂಸದರನ್ನು ಅಮಾನತ್ತುಗೊಳಿಸಿದೆ. ಇದೊಂದು ಅಮಾನವೀಯ ಕೃತ್ಯ, ಸಂವಿಧಾನದ ಕಗ್ಗೊಲೆಯಾಗಿದೆ. ಇದು ದೇಶಕ್ಕೆ ಒಂದು ಕಪ್ಪು ಚುಕ್ಕೆಯಾಗಿದೆ.ಈ ಹಿನ್ನಲೆಯಲ್ಲಿ ಇಂತಹ ಸರ್ಕಾರ ಕೇಂದ್ರದಲ್ಲಿ ಇರಬಾರದು ಮುಂದಿನ ಲೋಕಸಭಾ ಚುನಾವಣೆಯಲ್ಲಿ ಜನ ಬಿಜೆಪಿ ಸರ್ಕಾರಕ್ಕೆ ತಕ್ಕವ ಉತ್ತರ ನೀಡಲಿದ್ದಾರೆ ಎಂದರು. ಈ ಸಂಧರ್ಭದಲ್ಲಿ ಸತೀಶ ಕುಲಕರ್ಣಿ,ಎಚ್. ಎಸ್.ನಸಲಾಪೂರೆ, ರಾಜು ಕೋಟಗಿ ,ಶಂಕರಗೌಡ ಪಾಟೀಲ, ಗಣೇಶ ಮೋಹಿತೆ,ದಸ್ತಗೀರ ಕಾಗವಾಡೆ, ನಾಮದೇವ ಕಾಂಬಳೆ, ನಿರ್ಮಲಾ ಪಾಟೀಲ,ಜಾಸ್ಮಿನ್ ,ಸಾಗರ ಪಿಂಗಟ,ಸಿದ್ದಾಶಿಂಗೆ,ಯಲ್ಲಪ್ಪಾ ಶಿಂಗೆ, ಅಬ್ದುಲಸತಾರ ಮುಲ್ಲಾ, ದಿಲೀಪ ಜವಾದಾರ,ರಾವಸಾಹೇಬ ಐಹೊಳೆ, ರೋಹಿತ ಯಾದವ, ಅವದೂತ ಗುರವ,ಪ್ರತಿ–ಕ್ಷಾ, ಭುಶನ ಸೇರಿದಂತೆ ಕಾಂಗ್ರೆಸ್ ಕಾರ್ಯಕರ್ತರು ಉಪಸ್ಥಿತರಿದ್ದರು.

ಕೇಂದ್ರ ಬಿಜೆಪಿ ವಿರುದ್ಧ ಕಪ್ಪ ಬಾವುಟ ಹಿಡಿದು ಕಾಂಗ್ರೆಸ್

ಧಾರವಾಡ: ಪ್ರತಿಪಕ್ಷದ ಸಂಸದರನ್ನು ಅಮನಾತು ಮಾಡಿರು ಕೇಂದ್ರ ಬಿಜೆಪಿ ಸರ್ಕಾರದ ನಿರ್ಧಾರವನ್ನು ಖಂಡಿಸಿದ ಧಾರವಾಡದಲ್ಲಿ ಕಾಂಗ್ರೆಸ್ ನಾಯಕರು ಪ್ರತಿಭಟನಾ ಮೆರವಣಿಗೆ ನಡೆಸಿ ಆಕ್ರೋಶ ವ್ಯಕ್ತಪಡಿಸಿದರು.ಹುಬ್ಬಳ್ಳಿ ಧಾರವಾಡ ಮಾಹಾನಗರ ಜಿಲ್ಲಾ ಕಾಂಗ್ರೆಸ್ ನೇತೃತ್ವದಲ್ಲಿ, ನಗರದ ಡಾ. ಬಾಬಾ ಸಾಹೇಬ್ ಅಂಬೇಡ್ಕರ್ ಮೂರ್ತಿಯಿಂದ ಜಿಲ್ಲಾಧಿಕಾರಿ ಕಚೇರಿಯವರೆಗೆ ಬ್ರತಿಭಟನೆ ಮೆರವಣಿಗೆ ನಡೆಸಿದ ಮುಖಂಡರು ಹಾಗೂ ಕಾರ್ಯಕರ್ತರು ಬಿಜೆಪಿ ವಿರುದ್ಧ ಧಿಕ್ಕಾರ ಕೂಗಿ ಆಕ್ರೋಶ ಹೊರಹಾಕಿದರು. ದೇಶದ ಇತಿಹಾಸದಲ್ಲಿಯೇ ಪ್ರತಿಪಕ್ಷದ ಸಂಸದರನ್ನು ಇಷ್ಟೊಂದು ಸಂಖ್ಯೆಯಲ್ಲಿ ಅಮಾನತು ಮಾಡಲಾಗಿದೆ. ಇಂದು ನಮ್ಮ ಕಾಂಗ್ರೆಸ್ ಎಐಸಿಸಿ ಅಧ್ಯಕ್ಷರು ಹಾಗೂ ಕೆಪಿಸಿಸಿಅಧ್ಯಕ್ಷರು ಆದ–'ೇಶದ ಮೇರೆಗೆ ಪ್ರತಿಭಟನೆ ಮಾಡಿಲಾಗಿದೆ. ಕೇಂದ್ರ ಬಿಜೆಪಿ ಸರ್ಕಾರ ಸರ್ವಾಧಿಜಾರ ದೋರಣೆ ಅನುಸರಿಸುತ್ತಿದೆ. ಪ್ರತಿಕ್ಷದ ಸಂಸದರ ವಿರುದ್ಧ ಅಮಾನತು ಅಸ್ತ್ರ ಬಳಸುತ್ತಲೇ ಬರುತ್ತಿದೆ. ವಿರೋಧ ಪಕ್ಷದ ಪ್ರಶ್ನೆಗಳಿಗೆ ಉತ್ತರ ನೀಡಲಾಗದೆ ಈರೀತಿ ನರೇಂದ್ರ ಮೋದಿಯವರು ನಡೆದುಕೊಳ್ಳುತ್ತಿರುವುದು ಪ್ರಜಾಪ್ರಭುತ್ವ ಕೊಗ್ಗೊಲೆಯಾಗಿದೆ. ಈ ಕೂಡಲೇ ಸಂಸದರ ಅಮಾನತನ್ನು ಕೇಂದ್ರ ಬಿಜೆಪಿ ಹೊಂದಕ್ಕೆ ಪಡೆಯಬೇಕು ಇಲ್ಲವಾದಲ್ಲಿ ಇನಷ್ಟು ಉಗ್ರ ಹೋರಾಟಕ್ಕೆ ನಾವು ಮುಂದಾಗಬೇಕಾಗುತ್ತದೆ ಎಂದು ಎಚ್ಚರಿಕೆ ನೀಡಿದರು.

ಸಿದ್ದರಾಮಯ್ಯ ಯಾವುದೋ ಒಂದು ಪಂಗಡದ ಮುಖ್ಯಮಂತ್ರಿಯಲ್ಲ

ಬೆಳಗಾವಿ: ಸಿದ್ದರಾಮಯ್ಯ ಅವರು ಕರ್ನಾಟಕದ ಎಲ್ಲರ ಸಿಎಂ ಆಗಿದ್ದಾರೆ. ಯಾವುದೋ ಒಂದು ಪಂಗಡದ ಮುಖ್ಯಮಂತ್ರಿಯಲ್ಲ ಎಂದು ಉಡುಪಿ ಪೇಜಾವರ ಮಠದ ವಿಶ್ವಪ್ರಸನ್ನ ತೀರ್ಥರು ಹೇಳಿದರು. ಹಿಜಾಬ್ ಬ್ಯಾನ್ ಆದೇಶ ವಾಪಸ್ ಪಡೆಯುತ್ತೇವೆ ಎಂಬ ಸಿಎಂ ಹೇಳಿಕೆ ವಿಚಾರಕ್ಕೆ ಅಸಮಾಧಾನ ವ್ಯಕ್ತಪಡಿಸಿದ ಶ್ರೀಗಳು, ಅದು ಸಮಾಜದಲ್ಲಿ ಒಂದು ಪಂಗಡವನ್ನು ಗು–ರಿಯಾಗಿರಿಸಿಕೊಂಡು, ಒಬ್ಬರಿಗೆ ಒಂದು ನ್ಯಾಯ ಇನ್ನೊಬ್ಬರಿಗೆ ಒಂದು ನ್ಯಾಯ, ಒಬ್ಬರಿಗೆ ಒಂದು ಕಾನೂನು ಇನ್ನೊಬ್ಬರಿಗೆ ಒಂದು ಕಾನೂನು ಮಾಡುವದು ಸರಿಯಲ್ಲ ಎಂದು ಹೇಳಿದರು.

ಪರಾರಿಯಾಗಿದ್ದ ನಾಲ್ವರು ಪೊಲೀಸ್ ವಶಕ್ಕೆ

ಸಂಕೇಶ್ವರ : ಹುಕ್ಕೇರಿ ತಾಲೂಕಿನ ಅಂಕಲಿ ಗ್ರಾಮದಲ್ಲಿ ಇತ್ತೀಚೆಗೆ ಕನ್ನಡ ಧ್ವಜ ತೆರವು ಮಾಡುವಂತೆ ಕನ್ನಡಿಗರ ಮೇಲೆ ಹಲ್ಲೆ ಮಾಡಿದ್ದ ನಾಲ್ವರನ್ನು ಕೊನೆಗೂ ಸಂಕೇಶ್ವರ ಪೊಲೀಸರು ಬಂಧಿಸಿದ್ದಾರೆ. ಇದರಿಂದ ಕನ್ನಡ ಹೋರಾಟಗಾರರು ಕರೆ ನೀಡಿದ್ದ ಸಂಕೇಶ್ವರ ಬಂದ್ ಹಿಂದಕ್ಕೆ ಪಡೆಯಲಾಗಿದೆ. ಕಳೆದ ಎರಡು ದಿನಗಳ ಹಿಂದೆ ಹುಕ್ಕೇರಿ ತಾಲೂಕಿನ ಅಂಕಲೆ ಗ್ರಾಮದಲ್ಲಿ ಹಾಕಲಾಗಿದ್ದ ಕನ್ನಡ ಧ್ವಜ ಹಾಗೂ ಸಂಗೊ